# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

**ಸಂಖ್ಯೆ: ಕವಿಪ್ರನಿನಿ/ಬಿ16/44953/2023–24 (NKK)** **ದಿನಾಂಕ: 14.10.2024**

## ಉದ್ಯೋಗ ಪ್ರಕಟಣೆ

**[Non-Kalyana-Karnataka (NKK) Posts] [ಮಿಕ್ಕುಳಿದ ವೃಂದದ ಹುದ್ದೆಗಳು]**

ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದಲ್ಲಿ **411 (380 + 31 ಬ್ಯಾಕ್‌ಲಾಗ್) ಕಿರಿಯ ಸ್ಟೇಷನ್ ಪರಿಚಾರಕ** ಮತ್ತು **81 (75 + 6 ಬ್ಯಾಕ್‌ಲಾಗ್) ಕಿರಿಯ ಪವರ್‌ಮ್ಯಾನ್** ಹುದ್ದೆಗಳನ್ನು ಹಾಗೂ ವಿವಿಧ ವಿದ್ಯುತ್ ಸರಬರಾಜು ಕಂಪನಿಗಳಲ್ಲಿ **2268 (1818 + 450 ಬ್ಯಾಕ್‌ಲಾಗ್) ಕಿರಿಯ ಪವರ್‌ಮ್ಯಾನ್** ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ನಿಗದಿತ ನಮೂನೆಯಲ್ಲಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಕಂಪನಿವಾರು ಹುದ್ದೆಗಳ ಮತ್ತು ಮೀಸಲಾತಿ ವಿವರ ಈ ಕೆಳಕಂಡಂತಿದೆ:-

## 1. ಹುದ್ದೆಗಳ ವರ್ಗೀಕರಣ:

## ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ:

**ಹುದ್ದೆ: ಕಿರಿಯ ಸ್ಟೇಷನ್ ಪರಿಚಾರಕ:**

| ಸಮತಲ ಮೀಸಲಾತಿ | ಪ.ಜಾ. | ಪ.ವ. | ಸಾಮಾನ್ಯ | ಪ್ರ-1 | ಪ್ರ-2ಎ | ಪ್ರ-2ಬಿ | ಪ್ರ-3ಎ | ಪ್ರ-3ಬಿ | ಒಟ್ಟು |
|---|---|---|---|---|---|---|---|---|---|
| ಸಾಮಾನ್ಯ | 31 | 14 | 82 | 8 | 27 | 8 | 8 | 9 | 187 |
| ಗ್ರಾಮೀಣ ಮೀಸಲಾತಿ | 16 | 7 | 42 | 5 | 15 | 4 | 4 | 5 | 98 |
| ಮಾಜಿ ಸೈನಿಕ | 6 | 2 | 16 | 1 | 5 | 1 | 1 | 1 | 33 |
| ಕನ್ನಡ ಮಾಧ್ಯಮ ಅಭ್ಯರ್ಥಿ | 3 | 1 | 8 | 1 | 3 | 1 | 1 | 1 | 19 |
| ಯೋಜನೆ ನಿರಾಶ್ರಿತ ಅಭ್ಯರ್ಥಿ | 3 | 1 | 8 | 0 | 3 | 0 | 0 | 1 | 16 |
| ವಿಕಲಚೇತನ ಅಭ್ಯರ್ಥಿ (ಶ್ರವಣ ದೋಷ ಮಾತ್ರ) | 4 | 2 | 9 | 1 | 3 | 1 | 1 | 1 | 22 |
| ತೃತೀಯ ಲಿಂಗ | 1 | 1 | 2 | 0 | 1 | 0 | 0 | 0 | 5 |
| ಒಟ್ಟು | 64 | 28 | 167 | 16 | 57 | 15 | 15 | 18 | 380 |

**ಹುದ್ದೆ: ಕಿರಿಯ ಪವರ್‌ಮ್ಯಾನ್:**

| ಸಮತಲ ಮೀಸಲಾತಿ | ಪ.ಜಾ. | ಪ.ವ. | ಸಾಮಾನ್ಯ | ಪ್ರ-1 | ಪ್ರ-2ಎ | ಪ್ರ-2ಬಿ | ಪ್ರ-3ಎ | ಪ್ರ-3ಬಿ | ಒಟ್ಟು |
|---|---|---|---|---|---|---|---|---|---|
| ಸಾಮಾನ್ಯ | 7 | 3 | 16 | 2 | 6 | 2 | 2 | 2 | 40 |
| ಗ್ರಾಮೀಣ ಮೀಸಲಾತಿ | 4 | 2 | 9 | 1 | 3 | 1 | 1 | 1 | 22 |
| ಮಾಜಿ ಸೈನಿಕ | 1 | 0 | 3 | 0 | 1 | 0 | 0 | 0 | 5 |
| ಕನ್ನಡ ಮಾಧ್ಯಮ ಅಭ್ಯರ್ಥಿ | 0 | 0 | 1 | 0 | 0 | 0 | 0 | 0 | 1 |
| ಯೋಜನೆ ನಿರಾಶ್ರಿತ ಅಭ್ಯರ್ಥಿ | 0 | 0 | 1 | 0 | 0 | 0 | 0 | 0 | 1 |
| ವಿಕಲಚೇತನ ಅಭ್ಯರ್ಥಿ (ಶ್ರವಣ ದೋಷ ಮಾತ್ರ) | 1 | 1 | 2 | 0 | 1 | 0 | 0 | 0 | 5 |
| ತೃತೀಯ ಲಿಂಗ | 0 | 0 | 1 | 0 | 0 | 0 | 0 | 0 | 1 |
| ಒಟ್ಟು | 13 | 6 | 33 | 3 | 11 | 3 | 3 | 3 | 75 |

* ಅಧಿಸೂಚಿತ ಅಂಗವಿಕಲತೆ ಹೊಂದಿರುವ ಅಭ್ಯರ್ಥಿಗಳು ಲಭ್ಯವಿಲ್ಲದಿದ್ದಲ್ಲಿ, ಅಂತಹ ರಿಕ್ತ ಸ್ಥಾನಗಳನ್ನು ಮುಂದಿನ ನೇಮಕಾತಿಗೆ ಕೊಂಡೊಯ್ಯಲಾಗುವುದು.

Visit to "KarnatakaHelp.in"



## : ಬ್ಯಾಕ್‌ಲಾಗ್ ಹುದ್ದೆಗಳು :

### ಹುದ್ದೆ: ಕಿರಿಯ ಸ್ಟೇಷನ್ ಪರಿಚಾರಕ:

| ಸಮತಲ ಮೀಸಲಾತಿ | ಪ.ಜಾ. | ಪ.ವ. | ಸಾಮಾನ್ಯ | ಪ್ರ-1 | ಪ್ರ-2ಎ | ಪ್ರ-2ಬಿ | ಪ್ರ-3ಎ | ಪ್ರ-3ಬಿ | ಒಟ್ಟು |
|---|---|---|---|---|---|---|---|---|---|
| ಸಾಮಾನ್ಯ | 4 | 2 | 6 | 4 | 3 | 1 | 2 | 1 | **23** |
| ಗ್ರಾಮೀಣ ಮೀಸಲಾತಿ | 1 | 0 | 0 | 0 | 2 | 0 | 0 | 0 | **3** |
| ಮಾಜಿ ಸೈನಿಕ | 0 | 0 | 1 | 0 | 0 | 1 | 0 | 0 | **2** |
| ಯೋಜನೆ ನಿರಾಶ್ರಿತ ಅಭ್ಯರ್ಥಿ | 0 | 0 | 1 | 0 | 0 | 0 | 0 | 0 | **1** |
| ವಿಕಲಚೇತನ ಅಭ್ಯರ್ಥಿ (ಶ್ರವಣ ದೋಷ ಮಾತ್ರ) | 0 | 0 | 2 | 0 | 0 | 0 | 0 | 0 | **2** |
| ಒಟ್ಟು | **5** | **2** | **10** | **4** | **5** | **2** | **2** | **1** | **31** |

* ಅಧಿಸೂಚಿತ ಅಂಗವಿಕಲತೆ ಹೊಂದಿರುವ ಅಭ್ಯರ್ಥಿಗಳು ಲಭ್ಯವಿಲ್ಲದಿದ್ದಲ್ಲಿ, ಆ ಹುದ್ದೆಗಳನ್ನು ಆಯಾ ಪ್ರವರ್ಗದ ಸಾಮಾನ್ಯ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು.

### ಹುದ್ದೆ: ಕಿರಿಯ ಪವರ್‌ಮ್ಯಾನ್:

| ಸಮತಲ ಮೀಸಲಾತಿ | ಪ.ಜಾ. | ಪ.ವ. | ಸಾಮಾನ್ಯ | ಪ್ರ-1 | ಪ್ರ-2ಎ | ಪ್ರ-2ಬಿ | ಪ್ರ-3ಎ | ಪ್ರ-3ಬಿ | ಒಟ್ಟು |
|---|---|---|---|---|---|---|---|---|---|
| ಸಾಮಾನ್ಯ | 0 | 0 | 1 | 0 | 2 | 0 | 0 | 1 | **4** |
| ಮಾಜಿ ಸೈನಿಕ | 0 | 0 | 1 | 0 | 0 | 0 | 0 | 0 | **1** |
| ಕನ್ನಡ ಮಾಧ್ಯಮ ಅಭ್ಯರ್ಥಿ | 0 | 0 | 0 | 0 | 0 | 0 | 1 | 0 | **1** |
| ಒಟ್ಟು | **0** | **0** | **2** | **0** | **2** | **0** | **1** | **1** | **6** |

## 2. ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ನಿಯಮಿತ:

### ಹುದ್ದೆ: ಕಿರಿಯ ಪವರ್‌ಮ್ಯಾನ್:

| ಸಮತಲ ಮೀಸಲಾತಿ | ಪ.ಜಾ. | ಪ.ವ. | ಸಾಮಾನ್ಯ | ಪ್ರ-1 | ಪ್ರ-2ಎ | ಪ್ರ-2ಬಿ | ಪ್ರ-3ಎ | ಪ್ರ-3ಬಿ | ಒಟ್ಟು |
|---|---|---|---|---|---|---|---|---|---|
| ಸಾಮಾನ್ಯ | 52 | 21 | 134 | 12 | 46 | 12 | 12 | 14 | **303** |
| ಗ್ರಾಮೀಣ ಮೀಸಲಾತಿ | 26 | 11 | 68 | 6 | 23 | 6 | 6 | 8 | **154** |
| ಮಾಜಿ ಸೈನಿಕ | 10 | 4 | 27 | 2 | 9 | 2 | 2 | 3 | **59** |
| ಕನ್ನಡ ಮಾಧ್ಯಮ ಅಭ್ಯರ್ಥಿ | 5 | 2 | 13 | 1 | 4 | 1 | 1 | 1 | **28** |
| ಯೋಜನೆ ನಿರಾಶ್ರಿತ ಅಭ್ಯರ್ಥಿ | 5 | 2 | 13 | 1 | 4 | 1 | 1 | 1 | **28** |
| ವಿಕಲಚೇತನ ಅಭ್ಯರ್ಥಿ (ಶ್ರವಣ ದೋಷ ಮಾತ್ರ) | 6 | 3 | 14 | 2 | 5 | 2 | 2 | 2 | **36** |
| ತೃತೀಯ ಲಿಂಗ | 1 | 1 | 3 | 1 | 1 | 1 | 1 | 1 | **10** |
| ಒಟ್ಟು | **105** | **44** | **272** | **25** | **92** | **25** | **25** | **30** | **618** |

* ಅಧಿಸೂಚಿತ ಅಂಗವಿಕಲತೆ ಹೊಂದಿರುವ ಅಭ್ಯರ್ಥಿಗಳು ಲಭ್ಯವಿಲ್ಲದಿದ್ದಲ್ಲಿ, ಅಂತಹ ರಿಕ್ತ ಸ್ಥಾನಗಳನ್ನು ಮುಂದಿನ ನೇಮಕಾತಿಗೆ ಕೊಂಡೊಯ್ಯಲಾಗುವುದು.

## : ಬ್ಯಾಕ್‌ಲಾಗ್ ಹುದ್ದೆಗಳು :

| ಸಮತಲ ಮೀಸಲಾತಿ | ಪ.ಜಾ. | ಪ.ವ. | ಸಾಮಾನ್ಯ | ಪ್ರ-1 | ಪ್ರ-2ಎ | ಪ್ರ-2ಬಿ | ಪ್ರ-3ಎ | ಪ್ರ-3ಬಿ | ಒಟ್ಟು |
|---|---|---|---|---|---|---|---|---|---|
| ಗ್ರಾಮೀಣ ಮೀಸಲಾತಿ | 9 | 3 | 24 | 3 | 15 | 2 | 1 | 4 | **61** |
| ಮಾಜಿ ಸೈನಿಕ | 15 | 3 | 56 | 4 | 9 | 2 | 4 | 2 | **95** |
| ಕನ್ನಡ ಮಾಧ್ಯಮ ಅಭ್ಯರ್ಥಿ | 2 | 0 | 5 | 0 | 4 | 0 | 0 | 0 | **11** |
| ಯೋಜನೆ ನಿರಾಶ್ರಿತ ಅಭ್ಯರ್ಥಿ | 1 | 0 | 8 | 1 | 3 | 0 | 1 | 2 | **16** |
| ವಿಕಲಚೇತನ ಅಭ್ಯರ್ಥಿ (ಶ್ರವಣ ದೋಷ ಮಾತ್ರ) | 23 | 4 | 28 | 5 | 25 | 5 | 7 | 8 | **105** |
| ಒಟ್ಟು | **50** | **10** | **121** | **13** | **56** | **9** | **13** | **16** | **288** |

* ಅಧಿಸೂಚಿತ ಅಂಗವಿಕಲತೆ ಹೊಂದಿರುವ ಅಭ್ಯರ್ಥಿಗಳು ಲಭ್ಯವಿಲ್ಲದಿದ್ದಲ್ಲಿ, ಆ ಹುದ್ದೆಗಳನ್ನು ಆಯಾ ಪ್ರವರ್ಗದ ಸಾಮಾನ್ಯ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು.

## 3. ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ:

### ಹುದ್ದೆ: ಕಿರಿಯ ಪವರ್‌ಮ್ಯಾನ್:

| ಸಮತಲ ಮೀಸಲಾತಿ | ಪ.ಜಾ. | ಪ.ವ. | ಸಾಮಾನ್ಯ | ಪ್ರ-1 | ಪ್ರ-2ಎ | ಪ್ರ-2ಬಿ | ಪ್ರ-3ಎ | ಪ್ರ-3ಬಿ | ಒಟ್ಟು |
|---|---|---|---|---|---|---|---|---|---|
| ಸಾಮಾನ್ಯ | 22 | 9 | 58 | 6 | 20 | 6 | 5 | 7 | **133** |
| ಗ್ರಾಮೀಣ ಮೀಸಲಾತಿ | 12 | 5 | 30 | 3 | 10 | 3 | 3 | 4 | **70** |
| ಮಾಜಿ ಸೈನಿಕ | 4 | 1 | 11 | 1 | 4 | 1 | 1 | 1 | **24** |
| ಕನ್ನಡ ಮಾಧ್ಯಮ ಅಭ್ಯರ್ಥಿ | 2 | 1 | 6 | 0 | 2 | 0 | 0 | 0 | **11** |
| ಯೋಜನೆ ನಿರಾಶ್ರಿತ ಅಭ್ಯರ್ಥಿ | 2 | 1 | 6 | 0 | 2 | 0 | 0 | 0 | **11** |
| ವಿಕಲಚೇತನ ಅಭ್ಯರ್ಥಿ (ಶ್ರವಣ ದೋಷ ಮಾತ್ರ) | 3 | 1 | 6 | 1 | 2 | 1 | 1 | 1 | **16** |
| ತೃತೀಯ ಲಿಂಗ | 1 | 1 | 2 | 0 | 1 | 0 | 0 | 0 | **5** |
| ಒಟ್ಟು | **46** | **19** | **119** | **11** | **41** | **11** | **10** | **13** | **270** |

* ಅಧಿಸೂಚಿತ ಅಂಗವಿಕಲತೆ ಹೊಂದಿರುವ ಅಭ್ಯರ್ಥಿಗಳು ಲಭ್ಯವಿಲ್ಲದಿದ್ದಲ್ಲಿ, ಅಂತಹ ರಿಕ್ತ ಸ್ಥಾನಗಳನ್ನು ಮುಂದಿನ ನೇಮಕಾತಿಗೆ ಕೊಂಡೊಯ್ಯಲಾಗುವುದು.

### : ಬ್ಯಾಕ್‌ಲಾಗ್ ಹುದ್ದೆಗಳು :

| ಸಮತಲ ಮೀಸಲಾತಿ | ಪ.ಜಾ. | ಪ.ವ. | ಸಾಮಾನ್ಯ | ಪ್ರ-1 | ಪ್ರ-2ಎ | ಪ್ರ-2ಬಿ | ಪ್ರ-3ಎ | ಪ್ರ-3ಬಿ | ಒಟ್ಟು |
|---|---|---|---|---|---|---|---|---|---|
| ಸಾಮಾನ್ಯ | 7 | 1 | 0 | 0 | 4 | 1 | 0 | 4 | **17** |
| ಗ್ರಾಮೀಣ ಮೀಸಲಾತಿ | 1 | 0 | 0 | 1 | 0 | 0 | 2 | 0 | **4** |
| ಯೋಜನೆ ನಿರಾಶ್ರಿತ ಅಭ್ಯರ್ಥಿ | 0 | 0 | 0 | 0 | 1 | 0 | 0 | 0 | **1** |
| ವಿಕಲಚೇತನ ಅಭ್ಯರ್ಥಿ (ಶ್ರವಣ ದೋಷ ಮಾತ್ರ) | 2 | 1 | 8 | 1 | 2 | 1 | 1 | 1 | **17** |
| ಒಟ್ಟು | **10** | **2** | **8** | **2** | **7** | **2** | **3** | **5** | **39** |

* ಅಧಿಸೂಚಿತ ಅಂಗವಿಕಲತೆ ಹೊಂದಿರುವ ಅಭ್ಯರ್ಥಿಗಳು ಲಭ್ಯವಿಲ್ಲದಿದ್ದಲ್ಲಿ, ಆ ಹುದ್ದೆಗಳನ್ನು ಆಯಾ ಪ್ರವರ್ಗದ ಸಾಮಾನ್ಯ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು.

Visit to "KarnatakaHelp.in"

## 4. ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ ನಿಯಮಿತ:

### ಹುದ್ದೆ: ಕಿರಿಯ ಪವರ್‌ಮ್ಯಾನ್:

| ಸಮತಲ ಮೀಸಲಾತಿ | ಪ.ಜಾ. | ಪ.ವ. | ಸಾಮಾನ್ಯ | ಪ್ರ-1 | ಪ್ರ-2ಎ | ಪ್ರ-2ಬಿ | ಪ್ರ-3ಎ | ಪ್ರ-3ಬಿ | ಒಟ್ಟು |
|---|---|---|---|---|---|---|---|---|---|
| ಸಾಮಾನ್ಯ | 42 | 17 | 107 | 9 | 37 | 9 | 9 | 12 | **242** |
| ಗ್ರಾಮೀಣ ಮೀಸಲಾತಿ | 21 | 9 | 55 | 5 | 19 | 5 | 5 | 6 | **125** |
| ಮಾಜಿ ಸೈನಿಕ | 8 | 3 | 22 | 2 | 7 | 2 | 2 | 2 | **48** |
| ಕನ್ನಡ ಮಾಧ್ಯಮ ಅಭ್ಯರ್ಥಿ | 4 | 2 | 11 | 1 | 4 | 1 | 1 | 1 | **25** |
| ಯೋಜನೆ ನಿರಾಶ್ರಿತ ಅಭ್ಯರ್ಥಿ | 4 | 1 | 11 | 1 | 3 | 1 | 1 | 1 | **23** |
| ವಿಕಲಚೇತನ ಅಭ್ಯರ್ಥಿ (ಶ್ರವಣ ದೋಷ ಮಾತ್ರ) | 5 | 2 | 11 | 1 | 4 | 1 | 1 | 2 | **27** |
| ತೃತೀಯ ಲಿಂಗ | 1 | 1 | 3 | 1 | 1 | 1 | 1 | 1 | **10** |
| ಒಟ್ಟು | **85** | **35** | **220** | **20** | **75** | **20** | **20** | **25** | **500** |

* ಅಧಿಸೂಚಿತ ಅಂಗವಿಕಲತೆ ಹೊಂದಿರುವ ಅಭ್ಯರ್ಥಿಗಳು ಲಭ್ಯವಿಲ್ಲದಿದ್ದಲ್ಲಿ, ಅಂತಹ ರಿಕ್ತ ಸ್ಥಾನಗಳನ್ನು ಮುಂದಿನ ನೇಮಕಾತಿಗೆ ಕೊಂಡೊಯ್ಯಲಾಗುವುದು.

## : ಬ್ಯಾಕ್‌ಲಾಗ್ ಹುದ್ದೆಗಳು :

| ಸಮತಲ ಮೀಸಲಾತಿ | ಪ.ಜಾ. | ಪ.ವ. | ಸಾಮಾನ್ಯ | ಪ್ರ-1 | ಪ್ರ-2ಎ | ಪ್ರ-2ಬಿ | ಪ್ರ-3ಎ | ಪ್ರ-3ಬಿ | ಒಟ್ಟು |
|---|---|---|---|---|---|---|---|---|---|
| ಸಾಮಾನ್ಯ | 6 | 1 | 0 | 1 | 3 | 2 | 4 | 2 | **19** |
| ಗ್ರಾಮೀಣ ಮೀಸಲಾತಿ | 5 | 1 | 0 | 0 | 4 | 1 | 1 | 2 | **14** |
| ಮಾಜಿ ಸೈನಿಕ | 1 | 0 | 0 | 0 | 0 | 1 | 1 | 2 | **5** |
| ಯೋಜನೆ ನಿರಾಶ್ರಿತ ಅಭ್ಯರ್ಥಿ | 1 | 0 | 0 | 0 | 0 | 1 | 0 | 0 | **2** |
| ವಿಕಲಚೇತನ ಅಭ್ಯರ್ಥಿ (ಶ್ರವಣ ದೋಷ ಮಾತ್ರ) | 3 | 0 | 10 | 1 | 3 | 1 | 1 | 1 | **20** |
| ಒಟ್ಟು | **16** | **2** | **10** | **2** | **10** | **6** | **7** | **7** | **60** |

* ಅಧಿಸೂಚಿತ ಅಂಗವಿಕಲತೆ ಹೊಂದಿರುವ ಅಭ್ಯರ್ಥಿಗಳು ಲಭ್ಯವಿಲ್ಲದಿದ್ದಲ್ಲಿ, ಆ ಹುದ್ದೆಗಳನ್ನು ಆಯಾ ಪ್ರವರ್ಗದ ಸಾಮಾನ್ಯ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು.

## 5. ಮಂಗಳೂರು ವಿದ್ಯುತ್ ಸರಬರಾಜು ಕಂಪನಿ ನಿಯಮಿತ:

### ಹುದ್ದೆ: ಕಿರಿಯ ಪವರ್‌ಮ್ಯಾನ್:

| ಸಮತಲ ಮೀಸಲಾತಿ | ಪ.ಜಾ. | ಪ.ವ. | ಸಾಮಾನ್ಯ | ಪ್ರ-1 | ಪ್ರ-2ಎ | ಪ್ರ-2ಬಿ | ಪ್ರ-3ಎ | ಪ್ರ-3ಬಿ | ಒಟ್ಟು |
|---|---|---|---|---|---|---|---|---|---|
| ಸಾಮಾನ್ಯ | 35 | 14 | 90 | 8 | 31 | 8 | 8 | 9 | **203** |
| ಗ್ರಾಮೀಣ ಮೀಸಲಾತಿ | 18 | 8 | 46 | 5 | 15 | 5 | 5 | 5 | **107** |
| ಮಾಜಿ ಸೈನಿಕ | 7 | 2 | 18 | 1 | 6 | 1 | 1 | 2 | **38** |
| ಕನ್ನಡ ಮಾಧ್ಯಮ ಅಭ್ಯರ್ಥಿ | 3 | 1 | 9 | 1 | 3 | 1 | 1 | 1 | **20** |
| ಯೋಜನೆ ನಿರಾಶ್ರಿತ ಅಭ್ಯರ್ಥಿ | 3 | 1 | 9 | 1 | 3 | 1 | 0 | 1 | **19** |
| ವಿಕಲಚೇತನ ಅಭ್ಯರ್ಥಿ (ಶ್ರವಣ ದೋಷ ಮಾತ್ರ) | 4 | 2 | 9 | 1 | 3 | 1 | 1 | 1 | **22** |
| ತೃತೀಯ ಲಿಂಗ | 1 | 1 | 2 | 0 | 1 | 0 | 0 | 1 | **6** |
| ಒಟ್ಟು | **71** | **29** | **183** | **17** | **62** | **17** | **16** | **20** | **415** |

* ಅಧಿಸೂಚಿತ ಅಂಗವಿಕಲತೆ ಹೊಂದಿರುವ ಅಭ್ಯರ್ಥಿಗಳು ಲಭ್ಯವಿಲ್ಲದಿದ್ದಲ್ಲಿ, ಅಂತಹ ರಿಕ್ತ ಸ್ಥಾನಗಳನ್ನು ಮುಂದಿನ ನೇಮಕಾತಿಗೆ ಕೊಂಡೊಯ್ಯಲಾಗುವುದು.

## : ಬ್ಯಾಕ್‌ಲಾಗ್ ಹುದ್ದೆಗಳು :

| ಸಮತಲ ಮೀಸಲಾತಿ | ಪ.ಜಾ. | ಪ.ವ. | ಸಾಮಾನ್ಯ | ಪ್ರ-1 | ಪ್ರ-2ಎ | ಪ್ರ-2ಬಿ | ಪ್ರ-3ಎ | ಪ್ರ-3ಬಿ | ಒಟ್ಟು |
|---|---|---|---|---|---|---|---|---|---|
| ಸಾಮಾನ್ಯ | 0 | 0 | 0 | 1 | 0 | 0 | 0 | 0 | **1** |
| ಗ್ರಾಮೀಣ ಮೀಸಲಾತಿ | 0 | 0 | 0 | 0 | 1 | 0 | 0 | 0 | **1** |
| ವಿಕಲಚೇತನ ಅಭ್ಯರ್ಥಿ (ಶ್ರವಣ ದೋಷ ಮಾತ್ರ) | 4 | 1 | 15 | 2 | 4 | 2 | 2 | 2 | **32** |
| ಒಟ್ಟು | **4** | **1** | **15** | **3** | **5** | **2** | **2** | **2** | **34** |

* ಅಧಿಸೂಚಿತ ಅಂಗವಿಕಲತೆ ಹೊಂದಿರುವ ಅಭ್ಯರ್ಥಿಗಳು ಲಭ್ಯವಿಲ್ಲದಿದ್ದಲ್ಲಿ, ಆ ಹುದ್ದೆಗಳನ್ನು ಆಯಾ ಪ್ರವರ್ಗದ ಸಾಮಾನ್ಯ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು.

## 6. ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿ ನಿಯಮಿತ:

### ಹುದ್ದೆ: ಕಿರಿಯ ಪವರ್‌ಮ್ಯಾನ್:

| ಸಮತಲ ಮೀಸಲಾತಿ | ಪ.ಜಾ. | ಪ.ವ. | ಸಾಮಾನ್ಯ | ಪ್ರ-1 | ಪ್ರ-2ಎ | ಪ್ರ-2ಬಿ | ಪ್ರ-3ಎ | ಪ್ರ-3ಬಿ | ಒಟ್ಟು |
|---|---|---|---|---|---|---|---|---|---|
| ಸಾಮಾನ್ಯ | 2 | 1 | 3 | 1 | 2 | 1 | 0 | 0 | **10** |
| ಗ್ರಾಮೀಣ ಮೀಸಲಾತಿ | 1 | 0 | 2 | 0 | 1 | 0 | 0 | 0 | **4** |
| ವಿಕಲಚೇತನ ಅಭ್ಯರ್ಥಿ (ಶ್ರವಣ ದೋಷ ಮಾತ್ರ) | 0 | 0 | 1 | 0 | 0 | 0 | 0 | 0 | **1** |
| ಒಟ್ಟು | **3** | **1** | **6** | **1** | **3** | **1** | **0** | **0** | **15** |

* ಅಧಿಸೂಚಿತ ಅಂಗವಿಕಲತೆ ಹೊಂದಿರುವ ಅಭ್ಯರ್ಥಿಗಳು ಲಭ್ಯವಿಲ್ಲದಿದ್ದಲ್ಲಿ, ಅಂತಹ ರಿಕ್ತ ಸ್ಥಾನಗಳನ್ನು ಮುಂದಿನ ನೇಮಕಾತಿಗೆ ಕೊಂಡೊಯ್ಯಲಾಗುವುದು.

Visit to "KarnatakaHelp.in"



## : ಬ್ಯಾಕ್‌ಲಾಗ್ ಹುದ್ದೆಗಳು :

| ಸಮತಲ ಮೀಸಲಾತಿ | ಪ.ಜಾ. | ಪ.ವ. | ಸಾಮಾನ್ಯ | ಪ್ರ-1 | ಪ್ರ-2ಎ | ಪ್ರ-2ಬಿ | ಪ್ರ-3ಎ | ಪ್ರ-3ಬಿ | ಒಟ್ಟು |
|---|---|---|---|---|---|---|---|---|---|
| ಸಾಮಾನ್ಯ | 4 | 0 | 2 | 1 | 0 | 1 | 0 | 0 | 8 |
| ಗ್ರಾಮೀಣ ಮೀಸಲಾತಿ | 2 | 0 | 0 | 0 | 0 | 0 | 0 | 1 | 3 |
| ಕನ್ನಡ ಮಾಧ್ಯಮ ಅಭ್ಯರ್ಥಿ | 0 | 0 | 0 | 0 | 0 | 0 | 0 | 1 | 1 |
| ಯೋಜನೆ ನಿರಾಶ್ರಿತ ಅಭ್ಯರ್ಥಿ | 1 | 0 | 0 | 0 | 0 | 0 | 0 | 0 | 1 |
| ವಿಕಲಚೇತನ ಅಭ್ಯರ್ಥಿ (ಶ್ರವಣ ದೋಷ ಮಾತ್ರ) | 3 | 1 | 5 | 1 | 3 | 1 | 1 | 1 | 16 |
| ಒಟ್ಟು | 10 | 1 | 7 | 2 | 3 | 2 | 1 | 3 | 29 |

* ಅಧಿಸೂಚಿತ ಅಂಗವಿಕಲತೆ ಹೊಂದಿರುವ ಅಭ್ಯರ್ಥಿಗಳು ಲಭ್ಯವಿಲ್ಲದಿದ್ದಲ್ಲಿ, ಆ ಹುದ್ದೆಗಳನ್ನು ಆಯಾ ಪ್ರವರ್ಗದ ಸಾಮಾನ್ಯ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು.

**ಸೂಚನೆ:**

i) ಈ ಉದ್ಯೋಗ ಪ್ರಕಟಣೆಗೆ ಅನುಗುಣವಾಗಿ, ಕಿರಿಯ ಪವರ್‌ಮ್ಯಾನ್ ಹುದ್ದೆಗೆ ಅರ್ಜಿ ಸಲ್ಲಿಸಲು ಬಯಸುವ ಅಭ್ಯರ್ಥಿಗಳು ಕವಿಪ್ರನಿನಿ ಅಥವಾ ವಿದ್ಯುತ್ ಸರಬರಾಜು ಕಂಪನಿಗಳು, ಇವುಗಳಲ್ಲಿ ಯಾವುದಾದರೂ ಒಂದು ಕಂಪನಿಗೆ ಮಾತ್ರ ಅರ್ಜಿ ಸಲ್ಲಿಸಲು ಅರ್ಹರಾಗಿರುತ್ತಾರೆ.

ii) ಕಿರಿಯ ಸ್ಟೇಷನ್ ಪರಿಚಾರಕ ಹುದ್ದೆಗೆ ಅರ್ಜಿ ಸಲ್ಲಿಸಲು ಬಯಸುವ ಅಭ್ಯರ್ಥಿಗಳು ಕವಿಪ್ರನಿನಿಗೆ ಮಾತ್ರ ಅರ್ಜಿ ಸಲ್ಲಿಸತಕ್ಕದ್ದು.

iii) ಅಭ್ಯರ್ಥಿಗಳು ಒಂದು ಹುದ್ದೆಗೆ ಒಂದು ಅರ್ಜಿಗಿಂತ ಹೆಚ್ಚಿನ ಅರ್ಜಿ ಸಲ್ಲಿಸಿದ್ದಲ್ಲಿ, ಕೊನೆಯದಾಗಿ ಸಲ್ಲಿಸಿರುವ ಅರ್ಹ ಅರ್ಜಿಯನ್ನು ಮಾತ್ರ ಪರಿಗಣಿಸಲಾಗುವುದು. ಇನ್ನುಳಿದ ಅರ್ಜಿಗಳೊಂದಿಗೆ ಸಲ್ಲಿಸಿರುವ ಅರ್ಜಿ ಶುಲ್ಕವನ್ನು ಯಾವುದೇ ಕಾರಣಕ್ಕೂ ಹಿಂಪಾವತಿಸಲಾಗುವುದಿಲ್ಲ. ಅಭ್ಯರ್ಥಿಗಳು ಅರ್ಜಿಯಲ್ಲಿ ತಿಳಿಸಿರುವ ಕಂಪನಿ ಆಯ್ಕೆಯು ಅಂತಿಮವಾಗಿರುತ್ತದೆ.

iv) ಕವಿಪ್ರನಿನಿಯಲ್ಲಿ ಕಿರಿಯ ಸ್ಟೇಷನ್ ಪರಿಚಾರಕ ಅಥವಾ ಕಿರಿಯ ಪವರ್‌ಮ್ಯಾನ್ ಹುದ್ದೆಗೆ ಆಯ್ಕೆಯಾಗುವ ಅಭ್ಯರ್ಥಿಗಳನ್ನು ರಾಜ್ಯಾದ್ಯಂತ ಕವಿಪ್ರನಿನಿಯ ಯಾವುದೇ ಕಚೇರಿಗಳ ವ್ಯಾಪ್ತಿಗೆ ಸ್ಥಳ ನಿಯುಕ್ತಿಗೊಳಿಸಲಾಗುವುದು.

v) ವಿವಿಧ ವಿದ್ಯುತ್ ಸರಬರಾಜು ಕಂಪನಿಗಳಲ್ಲಿ ಕಿರಿಯ ಪವರ್‌ಮ್ಯಾನ್ ಹುದ್ದೆಗೆ ಆಯ್ಕೆಯಾಗುವ ಅಭ್ಯರ್ಥಿಗಳನ್ನು ಸಂಬಂಧಪಟ್ಟ ವಿದ್ಯುತ್ ಸರಬರಾಜು ಕಂಪನಿಗಳಲ್ಲಿನ ಅಧಿಕಾರ ವ್ಯಾಪ್ತಿಯಲ್ಲಿ ನಿಯುಕ್ತಿಗೊಳಿಸಲಾಗುವುದು.

vi) ಅರ್ಹ ಅಭ್ಯರ್ಥಿಗಳ ಕೊರತೆಯಿಂದ ಭರ್ತಿಯಾಗದೆ ಉಳಿಯುವ ಹುದ್ದೆಗಳನ್ನು ಸರ್ಕಾರದಲ್ಲಿ ಚಾಲ್ತಿಯಲ್ಲಿರುವ ಮೀಸಲಾತಿ ನಿಯಮಗಳನುಸಾರ ಬ್ಯಾಕ್‌ಲಾಗ್ ಎಂದು ಪರಿಗಣಿಸಲಾಗುವುದು.

vii) ವಿಕಲಚೇತನ ಅಭ್ಯರ್ಥಿಗಳ ಭರ್ತಿಯನ್ನು ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 235 ಸೆನೆನಿ 2012, ದಿನಾಂಕ: 22.11.2016 ರಲ್ಲಿ ತಿಳಿಸಿರುವ ಮಾರ್ಗಸೂಚಿಯಂತೆ ಮಾಡಲಾಗುವುದು.

viii) ಕಲ್ಯಾಣ ಕರ್ನಾಟಕ ಕೋಟಾದ ಅಭ್ಯರ್ಥಿಗಳು, ಮಿಕ್ಕುಳಿದ ವೃಂದದ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಬಯಸಿದಲ್ಲಿ, ಪ್ರತ್ಯೇಕ ಅರ್ಜಿ ಶುಲ್ಕವನ್ನು ಪಾವತಿಸುವುದರ ಮೂಲಕ ಅರ್ಜಿ ಸಲ್ಲಿಸಬಹುದಾಗಿರುತ್ತದೆ.

ix) ಅನುಚ್ಛೇದ-371(ಜೆ) ಅಡಿಯಲ್ಲಿ, ಮಿಕ್ಕುಳಿದ ವೃಂದದಲ್ಲಿ ನೇಮಕಾತಿ ಹೊಂದುವ ಅಭ್ಯರ್ಥಿಯು, ಜಾರಿಯಲ್ಲಿರುವ ನಿಯಮದಂತೆ ತನ್ನ ಸೇವಾ ಅವಧಿಯಲ್ಲಿ ಅನುಚ್ಛೇದ-371(ಜೆ) ಮೀಸಲಾತಿ ಸೌಲಭ್ಯಗಳನ್ನು ಪಡೆಯಲು ಅವಕಾಶವಿರುವುದಿಲ್ಲ.

## 2. ಸಂಭಾವನೆ:

ಅ) ಕ್ರೋಢೀಕೃತ ಸಂಭಾವನೆ (ಮೊದಲ 3 ವರ್ಷಗಳು):

| | | |
|---|---|---|
| 1ನೇ ವರ್ಷ | : | **₹17,000/- ಮಾಸಿಕ** |
| 2ನೇ ವರ್ಷ | : | **₹19,000/- ಮಾಸಿಕ** |
| 3ನೇ ವರ್ಷ | : | **₹21,000/- ಮಾಸಿಕ** |

ಆ) ಆಯ್ಕೆಯಾದ ಅಭ್ಯರ್ಥಿಗಳನ್ನು ಕವಿಪ್ರನಿನಿ ನೌಕರಿ ಭರ್ತಿ ಮತ್ತು ಬಡತಿ ನಿಯಮಾವಳಿಗಳು ಹಾಗೂ ವಿದ್ಯುತ್ ಸರಬರಾಜು ಕಂಪನಿಗಳ ನೌಕರಿ ಭರ್ತಿ ಮತ್ತು ಬಡತಿ ನಿಯಮಾವಳಿಗಳ ಅಧ್ಯಾಯ-1 ರ 6(1) (ಇ) ರಂತೆ ಕೆಲವು ಷರತ್ತುಗಳಿಗೊಳಪಟ್ಟು, ಮೂರು (3) ವರ್ಷಗಳ ಅವಧಿಗೆ ತರಬೇತಿಗೆ ಒಳಪಡಿಸಲಾಗುವುದು. ತರಬೇತಿಯ ಅವಧಿಯಲ್ಲಿ, ಈ ಮೇಲೆ ತಿಳಿಸಿರುವ ಕ್ರೋಢೀಕೃತ ಸಂಭಾವನೆಯನ್ನು ಹೊರತುಪಡಿಸಿ, ಇನ್ನಿತರ ಯಾವುದೇ ಭತ್ಯೆ ಹಾಗೂ ಸೌಲಭ್ಯಗಳನ್ನು ಪಡೆಯತಕ್ಕದ್ದಲ್ಲ.

Visit to "KarnatakaHelp.in"



ಇ) ಮೂರು ವರ್ಷದ ತರಬೇತಿಯನ್ನು ತೃಪ್ತಿಕರವಾಗಿ ಪೂರೈಸಿದ ನಂತರ ಅಭ್ಯರ್ಥಿಗಳನ್ನು ವೇತನ ಶ್ರೇಣಿ ₹28550–600(5)–31550–750(5)–35300–950(5)–40050–1200(5)–46050–1450(6)–54750–1650(5)–63000 ರಲ್ಲಿ ಎರಡು(2) ವರ್ಷಗಳ ಕಾಲ ಪರೀಕ್ಷಾರ್ಥ ಅವಧಿಯಲ್ಲಿ ಇರಿಸಲಾಗುವುದು.

## 3. ಅರ್ಜಿ ಸಲ್ಲಿಸಲು ಅರ್ಹತೆ ಮತ್ತು ಅಗತ್ಯ ವಿದ್ಯಾರ್ಹತೆ:

ಎಸ್.ಎಸ್.ಎಲ್.ಸಿ. ಅಥವಾ 10ನೇ ತರಗತಿಯ (ಸಿ.ಬಿ.ಎಸ್.ಇ/ಐ.ಸಿ.ಎಸ್.ಇ) ಪರೀಕ್ಷೆಯನ್ನು ಕರ್ನಾಟಕ ರಾಜ್ಯದ ವಿದ್ಯಾಸಂಸ್ಥೆಗಳಿಂದ ತೇರ್ಗಡೆ ಹೊಂದಿರುವಂತಹ ಅಭ್ಯರ್ಥಿಗಳು ಮಾತ್ರ ಮೇಲೆ ತಿಳಿಸಿರುವ ಹುದ್ದೆಗೆ ಅರ್ಜಿಯನ್ನು ಸಲ್ಲಿಸಲು ಅರ್ಹರಾಗಿರುತ್ತಾರೆ.

**ಸೂಚನೆ:**

i) **ಮೇಲೆ ತಿಳಿಸಲಾದ ವಿದ್ಯಾರ್ಹತೆಯನ್ನು ಹೊರತುಪಡಿಸಿ ಇತರೆ ಯಾವುದೇ ಸಮನಾಂತರ ವಿದ್ಯಾರ್ಹತೆಯನ್ನು (Equivalent Qualification) ನೇಮಕಾತಿಗೆ ಪರಿಗಣಿಸಲಾಗುವುದಿಲ್ಲ.**

ii) **ಬಾಹ್ಯ ಅಥವಾ ಮುಕ್ತ ವಿಶ್ವವಿದ್ಯಾಲಯ ಅಥವಾ ಮುಕ್ತ ಶಾಲೆಯಿಂದ ಪಡೆದ ಎಸ್.ಎಸ್.ಎಲ್.ಸಿ./10ನೇ ತರಗತಿ (ಬ್ರಿಡ್ಜ್ ಕೋರ್ಸ್) ಉತ್ತೀರ್ಣತೆಯನ್ನು ನೇಮಕಾತಿಗೆ ಪರಿಗಣಿಸಲಾಗುವುದಿಲ್ಲ.**

iii) ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು, ಅಭ್ಯರ್ಥಿಗಳು ಈ ಮೇಲೆ ನಿಗದಿಪಡಿಸಿರುವ ಶೈಕ್ಷಣಿಕ ವಿದ್ಯಾರ್ಹತೆಯಲ್ಲಿ ಉತ್ತೀರ್ಣಗೊಂಡಿರತಕ್ಕದ್ದು ಹಾಗೂ ಅಂಕಪಟ್ಟಿಯನ್ನು ಹೊಂದಿರತಕ್ಕದ್ದು.

iv) ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಈ ಮೇಲಿನ ನಿಗದಿತ ಶೈಕ್ಷಣಿಕ ವಿದ್ಯಾರ್ಹತೆ ಪರೀಕ್ಷೆ ಬರೆದು, ಫಲಿತಾಂಶಕ್ಕಾಗಿ ಕಾಯುತ್ತಿರುವ ಅಭ್ಯರ್ಥಿಗಳು, ಅರ್ಜಿ ಸಲ್ಲಿಸಲು ಅರ್ಹರಾಗಿರುವುದಿಲ್ಲ.

v) ಈ ಅಧಿಸೂಚನೆಯನ್ವಯ ನೇಮಕಾತಿಗೆ ಪರಿಗಣಿಸಬೇಕಾಗುವ ವಿದ್ಯಾರ್ಹತೆ ಬಗ್ಗೆ ಅಂತಿಮ ನಿರ್ಧಾರ ಕೈಗೊಳ್ಳುವ ಹಕ್ಕನ್ನು ಕವಿಪ್ರನಿನಿ/ಎಸ್ಕಾಂಗಳು ಮಾತ್ರ ಹೊಂದಿರುತ್ತದೆ ಹಾಗೂ ಅಭ್ಯರ್ಥಿಗಳು ಅದಕ್ಕೆ ಬದ್ಧರಾಗಿರತಕ್ಕದ್ದು.

**ಇತರೆ ಅರ್ಹತೆಗಳು:**

i) ಕನ್ನಡದಲ್ಲಿ ಓದುವ ಮತ್ತು ಬರೆಯುವ ಜ್ಞಾನ ಹೊಂದಿರತಕ್ಕದ್ದು.

ii) ತೃಪ್ತಿಕರವಾದ ನೇತ್ರದೃಷ್ಟಿಯನ್ನು ಹೊಂದಿರತಕ್ಕದ್ದು.

iii) ತೃಪ್ತಿಕರ ದೇಹದಾರ್ಢ್ಯವನ್ನು ಹೊಂದಿರತಕ್ಕದ್ದು. ಕಠಿಣ ಕೆಲಸಗಳಾದ ಗುಂಡಿ ತೆಗೆಯುವುದು, ಗೋಪುರ ಅಥವಾ ಕಂಬ ಹತ್ತುವುದು, ಭಾರವಾದ ವಸ್ತುಗಳನ್ನು ಸಾಗಿಸುವುದು, ತಂತಿಗಳನ್ನು ಅಳವಡಿಸುವುದು, ಕಂಬಗಳನ್ನು ಬದಲಾಯಿಸುವುದು, ಇತ್ಯಾದಿ ಕೆಲಸಕಾರ್ಯಗಳನ್ನು ನಿರ್ವಹಿಸಲು ಶಕ್ತರಿರಬೇಕು ಮತ್ತು ಸಹನ ಶಕ್ತಿ ಪರೀಕ್ಷೆಯಲ್ಲಿ ಅರ್ಹತೆ ಗಳಿಸಬೇಕು. ಈ ಮೇಲೆ ತಿಳಿಸಿರುವ ಕೆಲಸ ಕಾರ್ಯಗಳನ್ನು ನಿರ್ವಹಿಸಲು ಎಲ್ಲಾ ರೀತಿಯಲ್ಲಿಯೂ ದೈಹಿಕವಾಗಿ ಸಾಮರ್ಥ್ಯ ಹೊಂದಿರತಕ್ಕದ್ದು.

## 4. ಹುದ್ದೆಗಳ ಭರ್ತಿ:

i) **ಅರ್ಜಿ ಸಲ್ಲಿಸಲು ಬಯಸುವ ಅಭ್ಯರ್ಥಿಗಳು ಕವಿಪ್ರನಿನಿ ಅಥವಾ ವಿದ್ಯುತ್ ಸರಬರಾಜು ಕಂಪನಿಗಳು, ಇವುಗಳಲ್ಲಿ ಯಾವುದಾದರೂ ಒಂದು ಕಂಪನಿಗೆ ಮಾತ್ರ ಅರ್ಜಿ ಸಲ್ಲಿಸಲು ಅರ್ಹರಾಗಿರುತ್ತಾರೆ.**

ii) **ಅಭ್ಯರ್ಥಿಗಳು ಒಂದು ಹುದ್ದೆಗೆ ಒಂದಕ್ಕಿಂತ ಹೆಚ್ಚಿನ ಅರ್ಜಿ ಸಲ್ಲಿಸಿದ್ದಲ್ಲಿ, ಕೊನೆಯದಾಗಿ ಸಲ್ಲಿಸಿರುವ ಅರ್ಹ ಅರ್ಜಿಯನ್ನು ಮಾತ್ರ ಪರಿಗಣಿಸಲಾಗುವುದು. ಇನ್ನುಳಿದ ಅರ್ಜಿಗಳೊಂದಿಗೆ ಸಲ್ಲಿಸಿರುವ ಅರ್ಜಿ ಶುಲ್ಕವನ್ನು ಯಾವುದೇ ಕಾರಣಕ್ಕೂ ಹಿಂಪಾವತಿಸಲಾಗುವುದಿಲ್ಲ.**

iii) ಕಿರಿಯ ಸ್ಟೇಷನ್ ಪರಿಚಾರಕ ಅಥವಾ ಕಿರಿಯ ಪವರ್‌ಮ್ಯಾನ್ ಹುದ್ದೆಗೆ ಅರ್ಜಿ ಸಲ್ಲಿಸುವಾಗ, 'ಬ್ಯಾಕ್‌ಲಾಗ್ ಹುದ್ದೆಗಳಿಗೆ' ಪ್ರತ್ಯೇಕವಾಗಿ ಅರ್ಜಿಯನ್ನು ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ.

## 5. ಆಯ್ಕೆಯ ವಿಧಾನ:

Visit to "KarnatakaHelp.in"

'ಸಹನ ಶಕ್ತಿ ಪರೀಕ್ಷೆ'ಯ ಕನಿಷ್ಠ ಮೂರು ಸ್ಪರ್ಧೆಗಳಲ್ಲಿ ಅರ್ಹತೆ ಹೊಂದಿರುವಂತಹ ಅಭ್ಯರ್ಥಿಗಳನ್ನು, ಎಸ್.ಎಸ್.ಎಲ್.ಸಿ ಅಥವಾ 10ನೇ ತರಗತಿಯ ಪರೀಕ್ಷೆಯ ವಿದ್ಯಾರ್ಹತೆಯಲ್ಲಿ ಗಳಿಸಿರುವ ಶೇಕಡಾವಾರು ಅಂಕಗಳ ಜ್ಯೇಷ್ಠತೆ ಆಧಾರದ ಮೇಲೆ ಕರ್ನಾಟಕ ಸರ್ಕಾರದಲ್ಲಿ ಚಾಲ್ತಿಯಲ್ಲಿರುವ ಮೀಸಲಾತಿ ನಿಯಮಗಳನ್ನು ಪಾಲಿಸಿ, ಆಯ್ಕೆ ಮಾಡಲಾಗುವುದು.

ಸಹನ ಶಕ್ತಿ ಪರೀಕ್ಷೆಗೆ ಈ ಕೆಳಗಿನ ಸ್ಪರ್ಧೆಗಳನ್ನು ನಿಗದಿಪಡಿಸಲಾಗಿದೆ.

| | | | |
|---|---|---|---|
| ಅ) | **ವಿದ್ಯುತ್ ಕಂಬ ಹತ್ತುವುದು** | **:** | **8 ಮೀಟರ್ ಎತ್ತರ (ಕಡ್ಡಾಯ)** |
| ಆ) | 100 ಮೀಟರ್ ಓಟ | : | 14 ಸೆಕೆಂಡ್‌ಗಳು |
| ಇ) | ಸ್ಕಿಪ್ಪಿಂಗ್ | : | ಒಂದು ನಿಮಿಷಕ್ಕೆ 50 ಬಾರಿ |
| ಈ) | ಶಾಟ್‌ಪುಟ್ (12 ಪೌಂಡ್‌ಗಳು) | : | 8 ಮೀಟರ್ ಎಸೆತ (3 ಅವಕಾಶಗಳು) |
| ಉ) | 800 ಮೀಟರ್ ಓಟ | : | 3 ನಿಮಿಷಗಳು |

**ವಿಶೇಷ ಸೂಚನೆ:**

1. ಸಹನ ಶಕ್ತಿ ಪರೀಕ್ಷೆಯನ್ನು ಕವಿಪ್ರನಿನಿ ಹಾಗೂ ವಿವಿಧ ವಿದ್ಯುತ್ ಸರಬರಾಜು ಕಂಪನಿಗಳಲ್ಲಿ ಏಕಕಾಲದಲ್ಲಿ ನಡೆಸಲಾಗುವುದು. ಸಹನ ಶಕ್ತಿ ಪರೀಕ್ಷೆಯನ್ನು ಅಭ್ಯರ್ಥಿಯು ಅರ್ಜಿ ಸಲ್ಲಿಸಿರುವ ಆಯಾ ಕಂಪನಿಯ ವ್ಯಾಪ್ತಿಯಲ್ಲಿ ನಡೆಸಲಾಗುವುದು.

2. ಮಿಕ್ಕುಳಿದ ವೃಂದ ಮತ್ತು ಸ್ಥಳೀಯ ವೃಂದ ಎರಡೂ ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳಿಗೆ ಒಂದೇ ಸಹನ ಶಕ್ತಿ ಪರೀಕ್ಷೆಯನ್ನು ನಡೆಸಲಾಗುವುದು ಮತ್ತು ಸದರಿ ಸಹನ ಶಕ್ತಿ ಪರೀಕ್ಷೆಯ ಫಲಿತಾಂಶವನ್ನು ಮಿಕ್ಕುಳಿದ ವೃಂದ ಮತ್ತು ಸ್ಥಳೀಯ ವೃಂದದ ಹುದ್ದೆಗಳಿಗೆ ಪರಿಗಣಿಸಲಾಗುವುದು.

3. ಕಿರಿಯ ಸ್ಟೇಷನ್ ಪರಿಚಾರಕ ಮತ್ತು ಕಿರಿಯ ಪವರ್‌ಮ್ಯಾನ್ ಹುದ್ದೆಗಳ ಕೆಲಸ ಕಾರ್ಯಗಳು ಕಠಿಣ ಹಾಗೂ ಅಪಾಯಕಾರಿಯಾಗಿದ್ದು, ಸದರಿ ಕೆಲಸ ಕಾರ್ಯಗಳನ್ನು ನಿರ್ವಹಿಸುವ ಸಂದರ್ಭದಲ್ಲಿ ಪರಸ್ಪರ ಸಂವಹನವು (Communication) ಅತ್ಯಾವಶ್ಯಕವಾಗಿರುತ್ತದೆ. **ಆದ್ದರಿಂದ ಅಂಗವಿಕಲ ಕೋಟಾದಡಿ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಮಾತನಾಡುವ ಸಾಮರ್ಥ್ಯ ಹೊಂದಿರತಕ್ಕದ್ದು.**

**ಟಿಪ್ಪಣಿ:**

i) ಸಹನ ಶಕ್ತಿಯ ಪರೀಕ್ಷೆಯ ಸ್ಪರ್ಧೆಗಳಿಗೆ ಯಾವುದೇ ಅಂಕಗಳನ್ನು ನಿಗದಿಪಡಿಸಿರುವುದಿಲ್ಲ. ಅಭ್ಯರ್ಥಿಗಳು ಆಯ್ಕೆಗೆ ಅರ್ಹರಾಗಲು **ಕಡ್ಡಾಯವಾಗಿ ವಿದ್ಯುತ್ ಕಂಬವನ್ನು ಹತ್ತುವುದು (ಸ್ಪರ್ಧೆ ಸಂಖ್ಯೆ: ಅ)** ಮತ್ತು ಇನ್ನುಳಿದ ಸ್ಪರ್ಧೆಗಳ ಪೈಕಿ **ಕನಿಷ್ಟ ಎರಡರಲ್ಲಿ** ಅರ್ಹತೆಯನ್ನು ಪಡೆಯತಕ್ಕದ್ದು.

**ಸೂಚನೆ:**
ಕಂಬ ಹತ್ತುವ ಸ್ಪರ್ಧೆಗೆ ಬೇಕಾಗಿರುವ ಎಲ್ಲಾ ರೀತಿಯ ಮುನ್ನೆಚ್ಚರಿಕೆಗಳನ್ನು ಕೈಗೊಳ್ಳಲಾಗಿರುತ್ತದೆ. ಆದಾಗ್ಯೂ ಅಭ್ಯರ್ಥಿಗಳು ತಮ್ಮ ಸ್ವಂತ ಹೊಣೆಯಿಂದಲೇ ಸ್ಪರ್ಧೆಯಲ್ಲಿ ಪಾಲ್ಗೊಳ್ಳುವುದರಿಂದ, ಯಾವುದಾದರೂ ಅವಘಡಗಳು ಸಂಭವಿಸಿದಲ್ಲಿ, ಅಭ್ಯರ್ಥಿಗಳ ವೈದ್ಯಕೀಯ ವೆಚ್ಚ ಅಥವಾ ಇನ್ನಾವುದೇ ರೀತಿಯ ಪರಿಹಾರವನ್ನು ನಿಗಮ/ಕಂಪನಿಯಿಂದ ಭರಿಸಲಾಗುವುದಿಲ್ಲ.

ii) ಸಹನ ಶಕ್ತಿ ಪರೀಕ್ಷೆ ಸಮಯದಲ್ಲಿ ಅಭ್ಯರ್ಥಿಗಳು ಸರ್ಕಾರಿ ಜಿಲ್ಲಾ ವೈದ್ಯಾಧಿಕಾರಿಗಳಿಂದ ನೀಡಲಾಗುವ ಶಾರೀರಿಕ ದಾರ್ಢ್ಯತೆ ಸಂಬಂಧ ವೈದ್ಯಕೀಯ ಅರ್ಹತಾ ಪ್ರಮಾಣ ಪತ್ರವನ್ನು ಹಾಜರುಪಡಿಸತಕ್ಕದ್ದು.

iii) ಸಹನ ಶಕ್ತಿ ಪರೀಕ್ಷೆಗೆ ಅಭ್ಯರ್ಥಿಗಳನ್ನು ಎಸ್.ಎಸ್.ಎಲ್.ಸಿ./10ನೇ ತರಗತಿಯಲ್ಲಿ ಗಳಿಸಿರುವ ಅಂಕಗಳ ಅರ್ಹತೆಯ ಆಧಾರದಲ್ಲಿ 1:5 ರ ಅನುಪಾತದಲ್ಲಿ ಕರೆಯಲಾಗುವುದು.

iv) ಮೂಲ ದಾಖಲಾತಿಗಳು/ಪ್ರಮಾಣ ಪತ್ರಗಳ ಇತರೆ ದಾಖಲಾತಿಗಳ ಪರಿಶೀಲನೆಯನ್ನು ಸಹನ ಶಕ್ತಿ ಪರೀಕ್ಷೆಗೆ ನಿಗದಿಪಡಿಸಿದ ದಿನಾಂಕದಂದು ಮಾಡಲಾಗುವುದು.

v) ಸಹನ ಶಕ್ತಿ ಪರೀಕ್ಷೆಯ ಸಮಯಕ್ಕೆ ಮೂಲ ದಾಖಲಾತಿಗಳು/ಪ್ರಮಾಣ ಪತ್ರಗಳ ಇತರೆ ಮೂಲ ದಾಖಲಾತಿಗಳ 'ಸ್ವಯಂ ದೃಢೀಕೃತ ಪ್ರತಿ'ಗಳನ್ನು ಕಡ್ಡಾಯವಾಗಿ ಸಲ್ಲಿಸುವುದು. **ಅಭ್ಯರ್ಥಿಯು ಮೂಲ ದಾಖಲಾತಿಗಳನ್ನು ಪರಿಶೀಲನೆಯ ಸಮಯದಲ್ಲಿ ಸಲ್ಲಿಸದಿದ್ದಲ್ಲಿ, ಸಹನ ಶಕ್ತಿ ಪರೀಕ್ಷೆಗೆ ಭಾಗವಹಿಸಲು ಅವಕಾಶವನ್ನು ನೀಡಲಾಗುವುದಿಲ್ಲ.**

vi) ಸಹನ ಶಕ್ತಿ ಪರೀಕ್ಷೆಯ ಸಂಭಾವ್ಯ ದಿನಾಂಕವನ್ನು ಮತ್ತು ಸಹನ ಶಕ್ತಿ ಪರೀಕ್ಷೆ ನಡೆಸಲಾಗುವ ಪರೀಕ್ಷಾ ಕೇಂದ್ರಗಳ ವಿವರಗಳನ್ನು ಕವಿಪ್ರನಿನಿ ಮತ್ತು ಆಯಾ ವಿದ್ಯುತ್ ಸರಬರಾಜು ಕಂಪನಿಗಳ ವೆಬ್‌ಸೈಟ್‌ನಲ್ಲಿ ಮುಂದಿನ ದಿನಗಳಲ್ಲಿ ತಿಳಿಸಲಾಗುವುದು. ಸಹನ ಶಕ್ತಿ ಪರೀಕ್ಷಾ ಕೇಂದ್ರಗಳನ್ನು ನಿಗದಿಪಡಿಸುವ ನಿರ್ಣಯವು ಕವಿಪ್ರನಿನಿ ಮತ್ತು ವಿವಿಧ ವಿದ್ಯುತ್ ಸರಬರಾಜು ಕಂಪನಿಗಳದ್ದಾಗಿರುತ್ತದೆ.

**Visit to "KarnatakaHelp.in"**

vii) ಸಹನ ಶಕ್ತಿ ಪರೀಕ್ಷೆಯನ್ನು ಕವಿಪ್ರನಿನಿ ಮತ್ತು ಎಸ್ಕಾಂಗಳು ನಿಗದಿಪಡಿಸುವ ಕೇಂದ್ರಗಳಲ್ಲಿ ನಡೆಸಲಾಗುವುದು. ಈ ವಿಷಯದಲ್ಲಿ ಕವಿಪ್ರನಿನಿ/ಎಸ್ಕಾಂಗಳ ತೀರ್ಮಾನವೇ ಅಂತಿಮವಾಗಿರುತ್ತದೆ. ಸಹನ ಶಕ್ತಿ ಪರೀಕ್ಷಾ ಕೇಂದ್ರಗಳ ಬದಲಾವಣೆ ಕುರಿತಂತೆ ಸಲ್ಲಿಸಲಾಗುವ ಕೋರಿಕೆಗಳನ್ನು ತಿರಸ್ಕರಿಸಲಾಗುವುದು

viii) ಅಭ್ಯರ್ಥಿಗಳು ತಮಗೆ ನಿಗದಿಪಡಿಸಿರುವ ಸಹನಾ ಶಕ್ತಿ ಪರೀಕ್ಷಾ ಕೇಂದ್ರಕ್ಕೆ ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗತಕ್ಕದ್ದು ಮತ್ತು ಅಭ್ಯರ್ಥಿಗಳು ಯಾವುದೇ ರೀತಿಯ ಪ್ರಯಾಣ ಭತ್ಯೆಗೆ ಅರ್ಹರಿರುವುದಿಲ್ಲ.

## 6. ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ದಿನಾಂಕ:

| ಪ್ರಾರಂಭಿಕ ದಿನಾಂಕ | ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | ಶುಲ್ಕ ಪಾವತಿಸಲು ಕೊನೆಯ ದಿನಾಂಕ |
|---|---|---|
| **21.10.2024** | **20.11.2024** | **25.11.2024** |

## 7. ಅರ್ಜಿ ಶುಲ್ಕ (ಹಿಂದಿರುಗಿಸಲಾಗುವುದಿಲ್ಲ) (Non-Refundable):

| | |
|---|---|
| ಸಾಮಾನ್ಯ ವರ್ಗದ ಅಭ್ಯರ್ಥಿಗಳು<br>ಪ್ರವರ್ಗ-1, 2(ಎ), 2(ಬಿ), 3(ಎ) ಮತ್ತು 3(ಬಿ) ಗೆ ಸೇರಿದ ಅಭ್ಯರ್ಥಿಗಳು | ₹590/- (ಸರಕು ಮತ್ತು ಸೇವಾ ತೆರಿಗೆ ಒಳಗೊಂಡಂತೆ).<br>ಅಂಚೆ ಇಲಾಖೆ ಸೇವಾ ಶುಲ್ಕ: ₹20/- + ₹4/- ಸೇವಾ ತೆರಿಗೆ<br>**ಒಟ್ಟು: ₹614/-** |
| ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ಅಭ್ಯರ್ಥಿಗಳು | ₹354/- (ಸರಕು ಮತ್ತು ಸೇವಾ ತೆರಿಗೆ ಒಳಗೊಂಡಂತೆ).<br>ಅಂಚೆ ಇಲಾಖೆ ಸೇವಾ ಶುಲ್ಕ: ₹20/- + ₹4/- ಸೇವಾ ತೆರಿಗೆ<br>**ಒಟ್ಟು: ₹378/-** |
| ವಿಕಲಚೇತನ ಅಭ್ಯರ್ಥಿಗಳು | ಶುಲ್ಕ ಪಾವತಿಯಿಂದ ವಿನಾಯಿತಿ ನೀಡಲಾಗಿದೆ. |

**ಸೂಚನೆ:**

1. **ಅಭ್ಯರ್ಥಿಗಳು ಅರ್ಜಿ ಶುಲ್ಕವನ್ನು ಅಂಚೆ ಕಚೇರಿಗಳ ಮುಖಾಂತರ ಪಾವತಿಸಬೇಕಿರುವುದರಿಂದ, ಮೇಲೆ ತಿಳಿಸಿರುವ ಅಂಚೆ ಇಲಾಖೆಯ ಸೇವಾ ಶುಲ್ಕವನ್ನು ಅರ್ಜಿ ಶುಲ್ಕದೊಂದಿಗೆ ಪಾವತಿಸತಕ್ಕದ್ದು.**
2. ಶ್ರವಣ ದೋಷ ಅಂಗವಿಕಲತೆ ಹೊಂದಿರುವ ಅಭ್ಯರ್ಥಿಗಳಿಗೆ ಅರ್ಜಿ ಶುಲ್ಕ ಪಾವತಿಯಿಂದ ವಿನಾಯಿತಿ ನೀಡಲಾಗಿದೆ. ಆದಾಗ್ಯೂ ಸದರಿ ಅಂಗವಿಕಲತೆಯ ಬಗ್ಗೆ ಸಕ್ಷಮ ಪ್ರಾಧಿಕಾರಿಯವರು ನೀಡಿರುವ ವೈದ್ಯಕೀಯ ದೃಢೀಕರಣ/ಅಂಗವಿಕಲತೆಯ ದೃಢೀಕರಣ ಪತ್ರ ಮತ್ತು ಇತ್ತೀಚಿನ Audiology/Audiometry Test and BERA ವರದಿಯನ್ನು ಹಾಜರುಪಡಿಸಬೇಕಿರುತ್ತದೆ.

## 8. ವಯೋಮಿತಿ:

ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಯು, ಈ ಕೆಳಕಂಡ ಕನಿಷ್ಠ ವಯೋಮಿತಿಯನ್ನು ಹೊಂದಿರಬೇಕು ಹಾಗೂ ಗರಿಷ್ಠ ವಯೋಮಿತಿಯನ್ನು ಮೀರಿರಬಾರದು:

| | |
|---|---|
| **ಕನಿಷ್ಠ ವಯೋಮಿತಿ (ಎಲ್ಲಾ ವರ್ಗದ ಅಭ್ಯರ್ಥಿಗಳಿಗೆ)** | 18 ವರ್ಷಗಳು |
| **ಗರಿಷ್ಠ ವಯೋಮಿತಿ** | |
| ಸಾಮಾನ್ಯ ವರ್ಗದ ಅಭ್ಯರ್ಥಿಗಳು | 35 ವರ್ಷಗಳು |
| ಪ್ರವರ್ಗ-2(ಎ), 2(ಬಿ), 3(ಎ) ಮತ್ತು 3(ಬಿ) ಗೆ ಸೇರಿದ ಅಭ್ಯರ್ಥಿಗಳು | 38 ವರ್ಷಗಳು |
| ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗ ಹಾಗೂ ಪ್ರವರ್ಗ-1 ಕ್ಕೆ ಸೇರಿದ ಅಭ್ಯರ್ಥಿಗಳು | 40 ವರ್ಷಗಳು |

**ವಯೋಮಿತಿ ಸಡಿಲಿಕೆಗಳು:**

ಈ ಕೆಳಗಿನ ಸಂದರ್ಭಗಳಲ್ಲಿ ನೇಮಕಾತಿಯ ಗರಿಷ್ಠ ವಯೋಮಿತಿಗೆ ಅವುಗಳ ಮುಂದೆ ತಿಳಿಸಿರುವಷ್ಟರ ಮಟ್ಟಿಗೆ ಹೆಚ್ಚಿಸಲಾಗುವುದು:-

| | | |
|---|---|---|
| i) | ಮಾಜಿ ಸೈನಿಕರಾಗಿದ್ದಲ್ಲಿ | ಅವರು ಸಶಸ್ತ್ರ ಪಡೆಯಲ್ಲಿ ಸೇವೆ ಸಲ್ಲಿಸಿರುವ ಅವಧಿಗೆ ಮೂರು ವರ್ಷಗಳನ್ನು ಸೇರಿಸಿ ಗರಿಷ್ಠ 45 ವರ್ಷಗಳನ್ನು ಮೀರದಂತೆ |

| | | |
|---|---|---|
| ii) | ಅಂಗವಿಕಲ ಅಭ್ಯರ್ಥಿಗಳಿಗೆ | 10 ವರ್ಷಗಳು |
| iii) | ವಿಧವೆಯಾಗಿದ್ದಲ್ಲಿ (ಅಭ್ಯರ್ಥಿಯು ಸಕ್ಷಮ ಪ್ರಾಧಿಕಾರದಿಂದ ತಾನು ವಿಧವೆಯೆಂದು ಹಾಗೂ ಮರು ಮದುವೆಯಾಗಿಲ್ಲವೆಂಬ ಪ್ರಮಾಣ ಪತ್ರ ಹಾಜರುಪಡಿಸತಕ್ಕದ್ದು) | 10 ವರ್ಷಗಳು |
| iv) | ವಿವಿಧ ವಿದ್ಯುತ್ ಸರಬರಾಜು ಕಂಪನಿಗಳಲ್ಲಿರುವ ಗ್ರಾಮ ವಿದ್ಯುತ್ ಪ್ರತಿನಿಧಿಗಳಿಗೆ (GVPs) (ಮೈಕ್ರೋ ಫೀಡರ್ ಫ್ರಾಂಚೈಸಿ), ಅವರು ಗ್ರಾಮ ವಿದ್ಯುತ್ ಪ್ರತಿನಿಧಿಯಾಗಿ ಸಲ್ಲಿಸಿರುವ ಅವಧಿಯಷ್ಟು.<br>**<u>ಸೂಚನೆ:</u> ಕವಿಪ್ರನಿನಿಗೆ ಅರ್ಜಿ ಸಲ್ಲಿಸಿದಲ್ಲಿ ಗ್ರಾಮ ವಿದ್ಯುತ್ ಪ್ರತಿನಿಧಿಗಳಿಗೆ (GVPs) (ಮೈಕ್ರೋ ಫೀಡರ್ ಫ್ರಾಂಚೈಸಿ) ವಯೋಮಿತಿಯಲ್ಲಿ ಸಡಿಲಿಕೆಯನ್ನು ನೀಡಲಾಗುವುದಿಲ್ಲ.** | ಗರಿಷ್ಠ 10 ವರ್ಷಗಳು |

## 9. ಅರ್ಜಿ ಸಲ್ಲಿಸುವ ವಿಧಾನ:

i) ಅರ್ಜಿಯನ್ನು ಕಡ್ಡಾಯವಾಗಿ ಕವಿಪ್ರನಿನಿ ಅಥವಾ ವಿದ್ಯುತ್ ಸರಬರಾಜು ಕಂಪನಿಗಳ ಈ ಕೆಳಗೆ ತಿಳಿಸಿರುವ ಯಾವುದಾದರೊಂದು ವೆಬ್-ಸೈಟ್ ಮೂಲಕ ಸಲ್ಲಿಸಬಹುದಾಗಿರುತ್ತದೆ. ಇತರೆ ಯಾವುದೇ ವಿಧಾನದಲ್ಲಿ ಅರ್ಜಿಗಳನ್ನು ಸಲ್ಲಿಸಲು ಅವಕಾಶವಿರುವುದಿಲ್ಲ.

https://kptcl.karnataka.gov.in
https://bescom.karnataka.gov.in
https://cescmysore.karnataka.gov.in
https://mescom.karnataka.gov.in
https://hescom.karnataka.gov.in
https://gescom.karnataka.gov.in

ii) **ಅಭ್ಯರ್ಥಿಗಳು ಅರ್ಜಿಯನ್ನು 'ಆನ್‌ಲೈನ್ ಮುಖಾಂತರ ದಿನಾಂಕ: 21.10.2024 ರಿಂದ 20.11.2024 ರವರೆಗೆ ಸಲ್ಲಿಸಬಹುದಾಗಿರುತ್ತದೆ.**

iii) ಆನ್-ಲೈನ್ ಮೂಲಕ ಅರ್ಜಿಗಳನ್ನು ಭರ್ತಿ ಮಾಡುವ ಮುನ್ನ ಅಭ್ಯರ್ಥಿಗಳು ವೆಬ್‌ಸೈಟ್ ನಲ್ಲಿ ಲಭ್ಯವಿರುವ ಎಲ್ಲಾ ಸೂಚನೆಗಳನ್ನು ಓದಿಕೊಳ್ಳತಕ್ಕದ್ದು.

iv) ಅಭ್ಯರ್ಥಿಗಳು ಒಂದು ಬಾರಿ ಮಾತ್ರ ಅರ್ಜಿಯನ್ನು ಸಲ್ಲಿಸಬೇಕು ಹಾಗೂ ಒಮ್ಮೆ ಸಲ್ಲಿಸಿದ ಅರ್ಜಿಯನ್ನು ಯಾವುದೇ ಕಾರಣಕ್ಕೂ ಬದಲಾಯಿಸಲು ಅವಕಾಶವಿರುವುದಿಲ್ಲ.

v) ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ, ತಮ್ಮ ಭಾವಚಿತ್ರ ಮತ್ತು ಸಹಿಯನ್ನು ಹೊರತುಪಡಿಸಿ, ಇನ್ಯಾವುದೇ ಭಾವಚಿತ್ರ/ಸಹಿಯನ್ನು Upload ಮಾಡಿದ್ದಲ್ಲಿ, ಅಂತಹ ಅರ್ಜಿಗಳನ್ನು ಯಾವುದೇ ಸೂಚನೆ ನೀಡದೆ ತಿರಸ್ಕರಿಸಲಾಗುವುದು.

vi) ಒಂದು ವೇಳೆ ಅರ್ಜಿ ಸಲ್ಲಿಸಿ, ಶುಲ್ಕ ಪಾವತಿಸದಿದ್ದಲ್ಲಿ, ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

vii) ಅರ್ಜಿ ಶುಲ್ಕದ ಚಲನ್ ಅನ್ನು ಕವಿಪ್ರನಿನಿ ಮತ್ತು ಆಯಾ ಕಂಪನಿಯ ವೆಬ್‌ಸೈಟ್ ನಿಂದ ಡೌನ್‌ಲೋಡ್ ಮಾಡಿಕೊಂಡು, ಅರ್ಜಿ ಶುಲ್ಕವನ್ನು ಕರ್ನಾಟಕ ರಾಜ್ಯದ ಯಾವುದಾದರೂ ಅಂಚೆ ಕಚೇರಿಯ ಮುಖಾಂತರ ಪಾವತಿಸಬೇಕಿರುತ್ತದೆ. ಅರ್ಜಿ ಶುಲ್ಕದ ಜೊತೆಗೆ **ರೂ.24/-** (ಜಿ.ಎಸ್.ಟಿ. ಸೇರಿಸಿ) ನ್ನು ಅಂಚೆ ಕಚೇರಿಯ ಸೇವಾ ಶುಲ್ಕವಾಗಿ ಪಾವತಿಸತಕ್ಕದ್ದು.

viii) **ಅರ್ಜಿ ಶುಲ್ಕವನ್ನು ದಿನಾಂಕ: 21.10.2024 ರಿಂದ ದಿನಾಂಕ: 25.11.2024 ರವರೆಗೆ ಕರ್ನಾಟಕ ರಾಜ್ಯದ ವ್ಯಾಪ್ತಿಯಲ್ಲಿರುವ ಯಾವುದಾದರೂ ಗಣಕೀಕೃತ ಅಂಚೆ ಕಚೇರಿಯಲ್ಲಿನ ವ್ಯವಹಾರದ ವೇಳೆಯಲ್ಲಿ ಪಾವತಿಸುತಕ್ಕದ್ದು.**

ix) ಒಮ್ಮೆ ಅರ್ಜಿ ಶುಲ್ಕವನ್ನು ಪಾವತಿಸಿದ ನಂತರ, ಅದನ್ನು ಯಾವುದೇ ಸಂದರ್ಭದಲ್ಲಿ ಹಿಂದಿರುಗಿಸಲಾಗುವುದಿಲ್ಲ ಅಥವಾ ಯಾವುದೇ ನೇಮಕಾತಿಗೆ ಹೊಂದಾಣಿಕೆ ಮಾಡಲಾಗುವುದಿಲ್ಲ.

x) ಅರ್ಜಿ ಶುಲ್ಕ ಪಾವತಿಯು ಖಚಿತಗೊಂಡ ನಂತರವೇ ಅರ್ಜಿದಾರರು ತಾವು ಸಲ್ಲಿಸಿದ ಅರ್ಜಿಯ ಮುದ್ರಿತ ಪ್ರತಿಗಳನ್ನು 'ಆನ್-ಲೈನ್' ಮೂಲಕ ಪಡೆಯಲು ಅವಕಾಶವಿರುತ್ತದೆ.

xi) ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೆ ವಿಳಂಬ ಮಾಡದೆ ಮುಂಚಿತವಾಗಿ ಅರ್ಜಿಗಳನ್ನು ಸಲ್ಲಿಸುವುದು.

xii) 'ಆನ್-ಲೈನ್' ಮೂಲಕ ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ತಾಂತ್ರಿಕ ತೊಂದರೆ ಅಥವಾ ಸಮಸ್ಯೆ ಉಂಟಾದಲ್ಲಿ ಮತ್ತು ಇತರೆ ಸ್ಪಷ್ಟೀಕರಣಕ್ಕಾಗಿ ಈ ಕೆಳಕಂಡ ಸಂಬಂಧಪಟ್ಟ ಆಯಾ ಕಂಪನಿಯ ಸಹಾಯವಾಣಿಗೆ (HELP LINE) ಬೆಳಿಗ್ಗೆ 10:30 ರಿಂದ ಸಂಜೆ 5:00 ಗಂಟೆಯವರೆಗೆ ಸಂಪರ್ಕಿಸಿ ಅಗತ್ಯ ಮಾಹಿತಿ ಪಡೆಯುವುದು:-

| | | |
|---|---|---|
| **ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ** | : | **080-22211527 EXT: 3872** |
| **ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ನಿಯಮಿತ** | : | **080-22258788** |
| **ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ** | : | **0821-2343384** |
| **ಮಂಗಳೂರು ವಿದ್ಯುತ್ ಸರಬರಾಜು ಕಂಪನಿ ನಿಯಮಿತ** | : | **0824-2885759** |
| **ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ ನಿಯಮಿತ** | : | **0836-2223865, 0836-2223867** |
| **ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿ ನಿಯಮಿತ** | : | **08472-256647, 08472-239004** |

xiii) **ಅರ್ಜಿ ಶುಲ್ಕ ಪಾವತಿ ವಿಚಾರಣೆಗಾಗಿ:**

ಅಭ್ಯರ್ಥಿಗಳು ಅರ್ಜಿ ಶುಲ್ಕ ಪಾವತಿಸಿರುವ ಬಗ್ಗೆ www.karnatakapost.gov.in ನಲ್ಲಿ ಅರ್ಜಿ ಶುಲ್ಕ ಪಾವತಿಸಿದ **48** ಗಂಟೆಗಳ ನಂತರ ದೃಢಪಡಿಸಿಕೊಳ್ಳಬಹುದಾಗಿದೆ. ಪಾವತಿ ಸಂದರ್ಭದಲ್ಲಿ ಯಾವುದೇ ಸ್ಪಷ್ಟೀಕರಣಕ್ಕಾಗಿ ಅಭ್ಯರ್ಥಿಗಳು ಅಂಚೆ ಕಚೇರಿ ಸಹಾಯವಾಣಿ ದೂರವಾಣಿ ಸಂಖ್ಯೆ: 080-22392668 **(ಸೋಮವಾರದಿಂದ ಶುಕ್ರವಾರದವರೆಗೆ, ಸಮಯ ಬೆಳಗ್ಗೆ 10:00 ಗಂಟೆಯಿಂದ ಸಂಜೆ 06:00 ಗಂಟೆಯವರೆಗೆ)** ಸಂಪರ್ಕಿಸುವುದು.

## 10. ಸಾಮಾನ್ಯ ಸೂಚನೆಗಳು:

i) ಆಯ್ಕೆಯಾದ ಅಭ್ಯರ್ಥಿಗಳಿಗೆ ಸಂಬಂಧಪಟ್ಟ ನಿಗಮ/ಕಂಪನಿಯ ನೇಮಕಾತಿ ಪ್ರಾಧಿಕಾರದಿಂದ ನೇಮಕಾತಿ ಆದೇಶವನ್ನು ನೀಡಲಾಗುವುದು.

ii) ಭಾರತೀಯ ನಾಗರೀಕರು ಮಾತ್ರ ಅರ್ಜಿ ಸಲ್ಲಿಸಲು ಅರ್ಹರಾಗಿರುತ್ತಾರೆ.

iii) ಅಭ್ಯರ್ಥಿಯು ಅಪರಾಧಿಯೆಂದು ಘೋಷಿಸಲ್ಪಟ್ಟರೆ ಅಥವಾ ಕೇಂದ್ರ ಲೋಕಸೇವಾ/ರಾಜ್ಯ ಲೋಕಸೇವಾ ಆಯೋಗದಿಂದ ಯಾವುದೇ ಪರೀಕ್ಷೆಯನ್ನು ಬರೆಯಲು ಅಥವಾ ಯಾವುದೇ ಹುದ್ದೆಗೆ ಆಯ್ಕೆಯಾಗಲು ತಾತ್ಕಾಲಿಕವಾಗಿ/ಖಾಯಂ ಆಗಿ ತಡೆಹಿಡಿಯಲ್ಪಟ್ಟಿದ್ದರೆ ಅಂತಹವರನ್ನು ನೇಮಕಾತಿಗೆ ಪರಿಗಣಿಸಲಾಗುವುದಿಲ್ಲ. ಆದಾಗ್ಯೂ ನಿಗಮವು ಅಂತಹ ಪ್ರಕರಣವನ್ನು ಕೂಲಂಕುಷವಾಗಿ ಪರಿಶೀಲಿಸಿದ ನಂತರ, ಅಂತಹ ಅಭ್ಯರ್ಥಿಯು ಅರ್ಹನೆಂದು ತೀರ್ಮಾನಿಸಿದಲ್ಲಿ ಮಾತ್ರ ನೇಮಕಾತಿಗೆ ಅರ್ಹನಾಗಿರುತ್ತಾನೆ.

iv) ಅಭ್ಯರ್ಥಿಗಳು ಅರ್ಜಿಯಲ್ಲಿ ಭರ್ತಿ ಮಾಡಿರುವ ವಿವರಗಳು ಅಂತಿಮವಾಗಿರುತ್ತದೆ. ಯಾವುದೇ ಸಂದರ್ಭದಲ್ಲೂ ವಿವರಗಳ ಬದಲಾವಣೆಗೆ ಅವಕಾಶವಿರುವುದಿಲ್ಲ. ಆದ್ದರಿಂದ ಆನ್-ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸುವ ಸಂದರ್ಭದಲ್ಲಿ ವಿವರಗಳ ಬಗ್ಗೆ ಸರಿಯಾಗಿ ಖಚಿತಪಡಿಸಿಕೊಳ್ಳುವುದು.

v) ಅರ್ಜಿಯಲ್ಲಿ ಸುಳ್ಳು ಮಾಹಿತಿಗಳನ್ನು ಒದಗಿಸಿ, ಉದ್ಯೋಗ ಪಡೆದ ಅಭ್ಯರ್ಥಿಗಳನ್ನು ಸೇವೆಯಿಂದ ವಜಾಗೊಳಿಸಲಾಗುವುದು.

vi) ಅರ್ಜಿಯಲ್ಲಿ ನೀಡುವ ಅಂಚೆ ವಿಳಾಸವು ಅಂತಿಮವಾಗಿದ್ದು, ಪತ್ರ ವ್ಯವಹಾರವನ್ನು ಅದೇ ವಿಳಾಸದೊಂದಿಗೆ ನಡೆಸಲಾಗುವುದು. ವಿಳಾಸ ಬದಲಾವಣೆಗೆ ಸಂಬಂಧಿಸಿದಂತೆ ಯಾವುದೇ ಪತ್ರ ವ್ಯವಹಾರಕ್ಕೆ ಅವಕಾಶವಿರುವುದಿಲ್ಲ.

vii) ಅರ್ಜಿಗಳನ್ನು ಆನ್ ಲೈನ್ ನಲ್ಲಿ ಭರ್ತಿ ಮಾಡುವ ಪೂರ್ವದಲ್ಲಿ ಅರ್ಹ ಅಭ್ಯರ್ಥಿಗಳು ವೆಬ್‌ಸೈಟ್‌ನಲ್ಲಿ ಅರ್ಜಿ ನಮೂನೆಯೊಂದಿಗೆ ಲಭ್ಯವಿರುವ ಸೂಚನೆಗಳನ್ನು ಗಮನಿಸತಕ್ಕದ್ದು.

viii) 'ಆನ್-ಲೈನ್' ಅರ್ಜಿಯನ್ನು ಭರ್ತಿ ಮಾಡಲು ಕವಿಪ್ರನಿನಿ/ಎಸ್ಕಾಂ ವೆಬ್‌ಸೈಟ್‌ಗಳಲ್ಲಿ ನೀಡಿರುವ ಸೂಚನೆಗಳನ್ನು ತಪ್ಪದೇ ಪಾಲಿಸತಕ್ಕದ್ದು. 'ಆನ್-ಲೈನ್' ಅರ್ಜಿಯನ್ನು ಭರ್ತಿ ಮಾಡುವಾಗ ಅಭ್ಯರ್ಥಿಯು ತಪ್ಪು ಮಾಹಿತಿ ನೀಡಿದ್ದಲ್ಲಿ ಅಥವಾ ಸೂಚನೆಗಳನ್ನು ಹೊರತುಪಡಿಸಿ ತಪ್ಪಾಗಿ ಮಾಹಿತಿ ಭರ್ತಿ ಮಾಡಿ ಅರ್ಜಿ ತಿರಸ್ಕೃತಗೊಂಡಲ್ಲಿ, ಅದಕ್ಕೆ ಅಭ್ಯರ್ಥಿಯು ನೇರ ಹೊಣೆಗಾರರಾಗಿರುತ್ತಾರೆ.

ix) ಅಭ್ಯರ್ಥಿಗಳು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ, ಪ್ರವರ್ಗ-1, 2ಎ, 2ಬಿ, 3ಎ, 3ಬಿ ಯಲ್ಲಿನ ಮೀಸಲಾತಿಗೆ ಹಾಗೂ ಸಮತಳ ಮೀಸಲಾತಿಗೆ ಸಂಬಂಧಿಸಿದಂತೆ, ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದಂದು ಕರ್ನಾಟಕ ಸರ್ಕಾರದಲ್ಲಿ ಚಾಲ್ತಿಯಲ್ಲಿರುವ ವಿವಿಧ ಆದೇಶಗಳಲ್ಲಿನ ಮಾನದಂಡವನ್ನು ತಿಳಿದಿರತಕ್ಕದ್ದು.

x) ಅಭ್ಯರ್ಥಿಗಳ ಅರ್ಹತೆ ಕುರಿತು ನಿಗಮ/ಕಂಪನಿಯ ತೀರ್ಮಾನವೇ ಅಂತಿಮವಾಗಿದ್ದು, ಅಭ್ಯರ್ಥಿಗಳು ಇದಕ್ಕೆ ಬದ್ಧರಾಗಿರತಕ್ಕದ್ದು.

xi) ನೇಮಕಾತಿಗಾಗಿ ಯಾವುದೇ ವಿಧದ ಪ್ರಭಾವ ಬೀರಲು ಅಭ್ಯರ್ಥಿ ನಡೆಸುವ ಪ್ರಯತ್ನವು, ಅಭ್ಯರ್ಥಿಯನ್ನು ನೇಮಕಾತಿಯಿಂದ ಅನರ್ಹಗೊಳಿಸುವುದು.

xii) ಅಭ್ಯರ್ಥಿಗಳು ಮೂಲ ದಾಖಲಾತಿಗಳು/ಪ್ರಮಾಣ ಪತ್ರಗಳ ಇತರೆ ಮೂಲ ದಾಖಲಾತಿಗಳನ್ನು ಸಲ್ಲಿಸಲು ಕರೆ ನೀಡಿದಾಗ, ಪರಿಶೀಲನೆಗಾಗಿ ದೃಢೀಕೃತ ಪ್ರತಿಗಳೊಂದಿಗೆ ಹಾಜರುಪಡಿಸತಕ್ಕದ್ದು.

xiii) ನೇಮಕಾತಿಗೆ ಆಯ್ಕೆಯಾದ ಅಭ್ಯರ್ಥಿಗಳು **ಉಚಿತ ವಿದ್ಯುಚ್ಛಕ್ತಿ ಸರಬರಾಜು ಸೌಲಭ್ಯಕ್ಕೆ ಅರ್ಹರಾಗಿರುವುದಿಲ್ಲ.**

xiv) ನಿಗಮವು ಯಾವುದೇ ಹಂತದಲ್ಲಾದರೂ ನೇಮಕಾತಿ ಪ್ರಕ್ರಿಯೆಯನ್ನು ರದ್ದುಗೊಳಿಸುವ ಹಾಗೂ ಅಗತ್ಯವಿದ್ದಲ್ಲಿ ಹೊಸದಾಗಿ/ತಿದ್ದುಪಡಿ ಪ್ರಕಟಣೆ ನೀಡುವ ಹಕ್ಕನ್ನು ಕಾಯ್ದಿರಿಸಿದೆ.

xv) ನೇಮಕಾತಿ ಪ್ರಕ್ರಿಯೆ ಚಾಲನೆಯಲ್ಲಿರುವಾಗ, ನೇಮಕಾತಿ ವಿಷಯಗಳಿಗೆ ಸಂಬಂಧಿಸಿದಂತೆ ಯಾವುದೇ ಪತ್ರ ವ್ಯವಹಾರ ಅಥವಾ ವಿಚಾರಣೆಗಳಿಗೆ ಅವಕಾಶವಿರುವುದಿಲ್ಲ.

xvi) ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ ಮತ್ತು ಹಿಂದುಳಿದ ವರ್ಗದ ಮೀಸಲಾತಿಯಡಿಯಲ್ಲಿ ಅರ್ಜಿ ಸಲ್ಲಿಸಿ ಅದೇ ಪ್ರವರ್ಗದಡಿಯಲ್ಲಿ ಆಯ್ಕೆಯಾಗುವಂತಹ ಅಭ್ಯರ್ಥಿಗಳ ಸಿಂಧುತ್ವ ಪ್ರಮಾಣ ಪತ್ರವನ್ನು ಸಂಬಂಧಿಸಿದ ಸಕ್ಷಮ ಪ್ರಾಧಿಕಾರದಿಂದ ಪಡೆಯಲಾಗುವುದು.

xvii) ಸರ್ಕಾರದ ಆದೇಶ ಸಂಖ್ಯೆ: ಇಎನ್ 119 ಇಇಬಿ 2015, ದಿನಾಂಕ: 23.05.2015 ರಲ್ಲಿ ಕಿರಿಯ ಸ್ಟೇಷನ್ ಪರಿಚಾರಕ ಹಾಗೂ ಕಿರಿಯ ಮಾರ್ಗದಾಳು ಹುದ್ದೆಯ ನೇರ ನೇಮಕಾತಿಯಲ್ಲಿ ಕರ್ನಾಟಕ ಸಿವಿಲ್ ಸೇವಾ (ಸಾಮಾನ್ಯ ನೇಮಕಾತಿ) ನಿಯಮ, 1977 ರ ನಿಯಮ 9(1ಬಿ) ಯ 3ನೇ ಪರಂತುಕದನ್ವಯ ಮಹಿಳೆಯರಿಗೆ ನೀಡುವ ಸಮತಳ ಮೀಸಲಾತಿಯಿಂದ ವಿನಾಯಿತಿಯನ್ನು ನೀಡಿರುತ್ತದೆ. ಆದಾಗ್ಯೂ, ಮಹಿಳಾ ಅಭ್ಯರ್ಥಿಗಳು ಮುಕ್ತ ಕೋಟಾದಡಿಯಲ್ಲಿ ಅರ್ಜಿ ಸಲ್ಲಿಸಬಹುದಾಗಿರುತ್ತದೆ.

xviii) ಶ್ರವಣ ದೋಷದ ಅಂಗವಿಕಲತೆಯ ಕೋಟಾದಡಿಯಲ್ಲಿ ಆಯ್ಕೆ ಬಯಸುವ ಅಭ್ಯರ್ಥಿಗಳು 'ಸಹನಾ ಶಕ್ತಿ ಪರೀಕ್ಷೆ' ಸಂದರ್ಭದಲ್ಲಿ ಸಂಬಂಧಪಟ್ಟ ವೈದ್ಯಕೀಯ ಪ್ರಾಧಿಕಾರಿಗಳು ನೀಡಿರುವ ದೃಢೀಕರಣ ಪತ್ರ ಮತ್ತು ಇತ್ತೀಚಿನ Audiology/Audiometry Test/BERA test ವರದಿಯನ್ನು ಕಡ್ಡಾಯವಾಗಿ ಹಾಜರುಪಡಿಸುವುದು. ಆದಾಗ್ಯೂ ಅಭ್ಯರ್ಥಿಯನ್ನು ನೇಮಕಾತಿಗೂ ಮುನ್ನ, ಸರ್ಕಾರದ ವೈದ್ಯಕೀಯ ಮಂಡಳಿಯಿಂದ ತಪಾಸಣೆಗೆ ಒಳಪಡಿಸಿ ಖಚಿತಪಡಿಸಿಕೊಳ್ಳಲಾಗುವುದು.

## 11. ಜಾತಿ ಮೀಸಲಾತಿ ಮತ್ತು ಸಮತಳ ಮೀಸಲಾತಿ ಕೋರುವ ಅಭ್ಯರ್ಥಿಗಳು ಮತ್ತು ಅದಕ್ಕೆ ಸಂಬಂಧಪಟ್ಟ ಪ್ರಮಾಣ ಪತ್ರಗಳು ಹಾಗೂ ಅದರ ನಿಯಮಗಳು:-

| | | |
|---|---|---|
| i) | ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳು | **'ನಮೂನೆ-ಡಿ'**<br>ಪ್ರಮಾಣ ಪತ್ರಗಳು ಜೀವಿತ ಅವಧಿಯವರೆಗೆ ಅಥವಾ ರದ್ದು ಮಾಡುವವರೆಗೆ ಸಿಂಧುತ್ವವನ್ನು ಹೊಂದಿದ್ದು, ಇಂತಹ ಪ್ರಮಾಣ ಪತ್ರಗಳನ್ನು, ದಿನಾಂಕದ ಮಿತಿಯಿಲ್ಲದೇ ಪರಿಗಣಿಸಲಾಗುವುದು (ಸರ್ಕಾರದ ಸುತ್ತೋಲೆ ಸಂಖ್ಯೆ: SWD 155 BCA 2011 ದಿನಾಂಕ: 22.02.2012) |
| ii) | ಪ್ರವರ್ಗ-1 ಕ್ಕೆ ಸೇರಿದ ಅಭ್ಯರ್ಥಿಗಳು | **'ನಮೂನೆ-ಇ'**<br>ಪ್ರಮಾಣ ಪತ್ರಗಳು ಜೀವಿತ ಅವಧಿಯವರೆಗೆ ಅಥವಾ ರದ್ದು ಮಾಡುವವರೆಗೆ ಸಿಂಧುತ್ವವನ್ನು ಹೊಂದಿದ್ದು, ಇಂತಹ ಪ್ರಮಾಣ ಪತ್ರಗಳನ್ನು, ದಿನಾಂಕದ ಮಿತಿಯಿಲ್ಲದೇ ಪರಿಗಣಿಸಲಾಗುವುದು (ಸರ್ಕಾರದ ಸುತ್ತೋಲೆ ಸಂಖ್ಯೆ: SWD 155 BCA 2011 ದಿನಾಂಕ: 22.02.2012) |
| iii) | ಪ್ರವರ್ಗ-2ಎ, 2ಬಿ, 3ಎ ಮತ್ತು 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು | **'ನಮೂನೆ-ಎಫ್'**<br>• ಹಿಂದುಳಿದ ವರ್ಗಗಳ ಪ್ರವರ್ಗ-2(ಎ), 2(ಬಿ), 3(ಎ) ಮತ್ತು 3(ಬಿ) ಮೀಸಲಾತಿ ಪ್ರಮಾಣ ಪತ್ರಗಳು (ಐದು) 5 ವರ್ಷ ಚಾಲ್ತಿಯಲ್ಲಿರುತ್ತದೆ. |

| | | |
|---|---|---|
| | | **ಅಭ್ಯರ್ಥಿಗಳು ಪಡೆದಿರುವ ಪ್ರಮಾಣ ಪತ್ರವು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರಬೇಕು.**<br>• ಅರ್ಜಿಗಳನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಸಂಬಂಧಿಸಿದ ಮೀಸಲಾತಿ ಪ್ರಮಾಣ ಪತ್ರಗಳನ್ನು ಅಭ್ಯರ್ಥಿಗಳು ಪಡೆದಿಟ್ಟುಕೊಂಡಿರತಕ್ಕದ್ದು.<br>• **ಕೊನೆಯ ದಿನಾಂಕದ ನಂತರ ಪಡೆದ ಪ್ರವರ್ಗ-2(ಎ), 2(ಬಿ), 3(ಎ) ಮತ್ತು 3(ಬಿ) ಮೀಸಲಾತಿ ಪ್ರಮಾಣ ಪತ್ರಗಳನ್ನು ತಿರಸ್ಕರಿಸಲಾಗುವುದು.** |

**<u>ಸಮತಳ ಮೀಸಲಾತಿ:</u>**

| | | |
|---|---|---|
| i) | ಗ್ರಾಮೀಣ ಮೀಸಲಾತಿ | • ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 08 ಸೆನೆನಿ 2001 ದಿನಾಂಕ: 13.02.2001 ರ ಅನ್ವಯ ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಿಯಮಗಳ ರೀತ್ಯಾ 1 ರಿಂದ 10ನೇ ತರಗತಿಯವರೆಗೆ ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿ ಉತ್ತೀರ್ಣರಾಗಿರುವವರು ಈ ಮೀಸಲಾತಿಯನ್ನು ಪಡೆಯಲು ಅರ್ಹರು.<br>• ಗ್ರಾಮೀಣ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳನ್ನು ಕ್ಲೇಮು ಮಾಡುವ ಸಾಮಾನ್ಯ ವರ್ಗದ ಅಭ್ಯರ್ಥಿಗಳು ನಮೂನೆ-2ನ್ನು ಸಂಬಂಧಪಟ್ಟ ಶಾಲಾ ಮುಖ್ಯೋಪಾಧ್ಯಾಯರ ಸಹಿ ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜುವಿನೊಂದಿಗೆ ಹಾಗೂ ಈ ಪ್ರಮಾಣ ಪತ್ರವಲ್ಲದೇ ಮೇಲುಸ್ತರಕ್ಕೆ (Creamy Layer) ಸೇರಿಲ್ಲದಿರುವ ಬಗ್ಗೆ ನಮೂನೆ-1 ರಲ್ಲಿ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಸಂಬಂಧಿಸಿದ ತಹಶೀಲ್ದಾರ್ ರವರಿಂದ ಪಡೆದಿಟ್ಟುಕೊಂಡಿರತಕ್ಕದ್ದು.<br>• ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, 2(ಎ), 2(ಬಿ), 3(ಎ) ಮತ್ತು 3(ಬಿ) ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು ಕಡ್ಡಾಯವಾಗಿ ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರವನ್ನು ನಮೂನೆ-2ರಲ್ಲಿ ಸಂಬಂಧಪಟ್ಟ ಶಾಲಾ ಮುಖ್ಯೋಪಾಧ್ಯಾಯರ ಸಹಿ, ಮೊಹರು ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜು, ಮೊಹರು ಜಾರಿ ಮಾಡಿದ ದಿನಾಂಕದೊಂದಿಗೆ ನಿಗದಿತ ನಮೂನೆಯಲ್ಲಿ ಪಡೆದಿಟ್ಟುಕೊಂಡಿರತಕ್ಕದ್ದು.<br>• ಜಾತಿ ಮೀಸಲಾತಿ ಕೋರಿರುವ ಗ್ರಾಮೀಣ ಅಭ್ಯರ್ಥಿಗಳ ಜಾತಿ ಮೀಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ, ಅಂತಹ ಅಭ್ಯರ್ಥಿಗಳು ಸಾಮಾನ್ಯ ವರ್ಗದ ಗ್ರಾಮೀಣ ಮೀಸಲಾತಿಗೆ ಸಂಬಂಧಿಸಿದಂತೆ, ನಮೂನೆ-1 (Creamy Layer) ಸಲ್ಲಿಸದಿದ್ದಲ್ಲಿ, ಅಂತಹ ಅಭ್ಯರ್ಥಿಗಳು ಗ್ರಾಮೀಣ ಮೀಸಲಾತಿಗೂ ಸಹ ಅನರ್ಹರಾಗಿರುತ್ತಾರೆ. |
| ii) | ಕನ್ನಡ ಮಾಧ್ಯಮ ಅಭ್ಯರ್ಥಿ ಮೀಸಲಾತಿ | ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ 71 ಸೆನೆನಿ 2001, ದಿನಾಂಕ: 24.10.2002 ರ ಅನ್ವಯ ಕನ್ನಡ ಮಾಧ್ಯಮ ಮೀಸಲಾತಿ ಕೋರುವ ಅಭ್ಯರ್ಥಿಗಳು 1ನೇ ತರಗತಿಯಿಂದ 10ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಯರ ಸಹಿ, ಮೊಹರು ಮತ್ತು ಜಾರಿ ಮಾಡಿದ ನಿಗದಿತ ನಮೂನೆಯಲ್ಲಿ ಪಡೆದಿಟ್ಟುಕೊಂಡಿರತಕ್ಕದ್ದು. |

| | | |
|---|---|---|
| iii) | ಮಾಜಿ ಸೈನಿಕ ಮೀಸಲಾತಿ | ಸೇನೆಯಿಂದ ಬಿಡುಗಡೆ ಹೊಂದಿರುವುದಕ್ಕೆ ಸಕ್ಷಮ ಪ್ರಾಧಿಕಾರದಿಂದ ಪ್ರಮಾಣ ಪತ್ರ ಹೊಂದಿರತಕ್ಕದ್ದು. |
| iv) | ಯೋಜನೆಗಳಿಂದ ನಿರಾಶ್ರಿತ ಅಭ್ಯರ್ಥಿ | ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 23 ಸೆನೆನಿ 99, ದಿನಾಂಕ: 23.11.2000 ರನ್ವಯ ಯೋಜನೆಗಳಿಂದ ನಿರ್ವಸಿತರಾದ (ಆದರೆ ಈ ನಿಯಮಗಳು ಜಾರಿಯಾಗುವ 20 ವರ್ಷಕ್ಕೆ ಮುನ್ನ ನಿರ್ವಸಿತರಾದ ಕುಟುಂಬ ಅಭ್ಯರ್ಥಿಗಳಿಗೆ ಈ ಮೀಸಲಾತಿ ಅನ್ವಯವಾಗುವುದಿಲ್ಲ) ಕುಟುಂಬದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳಿಗೆ ಅರ್ಜಿ ಸಲ್ಲಿಸುವಂತಹ ಅಭ್ಯರ್ಥಿಗಳು ಸಂಬಂಧಿಸಿದ ತಹಶೀಲ್ದಾರ್‌ರವರಿಂದ ನಿಗದಿತ ನಮೂನೆಯಲ್ಲಿ ಪ್ರಮಾಣ ಪತ್ರವನ್ನು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು. |
| v) | ಅಂಗವಿಕಲ ಅಭ್ಯರ್ಥಿ ಮೀಸಲಾತಿ | **The Rights Of Persons With Disabilities Act, 2016 ರ ಅಡಿಯಲ್ಲಿ, ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 149 ಎಸ್‌ಆರ್‌ಆರ್ 2020, ದಿನಾಂಕ: 25.09.2020 ರಂತೆ, ಶೇ.40 ಕ್ಕಿಂತ ಕಡಿಮೆ ಇಲ್ಲದಂತಹ ಅಂಗವಿಕಲತೆಯುಳ್ಳ ಅಭ್ಯರ್ಥಿಗಳು ಮಾತ್ರ ಈ ಮೀಸಲಾತಿಯನ್ನು ಕೋರಲು ಅರ್ಹರು. ಶ್ರವಣದೋಷವುಳ್ಳವರು ಎಂದರೆ, ಪರಸ್ಪರ ಮಾತನಾಡುವಂಥ ಸಂದರ್ಭದಲ್ಲಿ ಶಬ್ದ ತರಂಗವನ್ನು ಸರಿಯಾಗಿರುವ ಕಿವಿ ಗ್ರಹಿಸುವಾಗ ಅರವತ್ತು ಡೆಸಿಬಲ್ ಅಥವಾ ಅದಕ್ಕೂ ಹೆಚ್ಚು ಸಾಮರ್ಥ್ಯವನ್ನು ಕಳೆದುಕೊಂಡಿರುವುದು".**<br><br>ಶ್ರವಣದೋಷದ ಅಂಗವಿಕಲತೆ ಹೊಂದಿರುವ ಬಗ್ಗೆ ಸಂಬಂಧಪಟ್ಟ ವೈದ್ಯಕೀಯ ಪ್ರಾಧಿಕಾರಿಗಳು ನೀಡಿರುವ ಪ್ರಮಾಣ ಪತ್ರ ಮತ್ತು ಈ ಕೆಳಗೆ ತಿಳಿಸಲಾಗಿರುವ ಆಸ್ಪತ್ರೆಗಳಿಂದ ಪಡೆದಿರುವ ಇತ್ತೀಚಿನ Audiology/Audiometry Test/BERA ವರದಿಯನ್ನು ಹೊಂದಿರಬೇಕು:<br><br>• All India Institute of Speech and Hearing, Naimisham Campus, Road No.3, T.K.Layout, Manasagangothri, Mysuru- 570006.<br>• Dr. S. R. Chandrasekhar Institute of Speech and Hearing, Kariyanapalya, Hennur Main Road, Lingarajapuram, Bengaluru- 560084.<br>• National Institute of Mental Health and Neuro Sciences, Hosur Road, Lakkasandra, Wilson Garden, Bengaluru- 560029.<br><br>ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 115 ಸೆನೆನಿ 2005 ದಿನಾಂಕ: 19.11.2005 ರಲ್ಲಿ ನಿಗದಿಪಡಿಸಿರುವ ನಮೂನೆಯಲ್ಲಿ ಅಂಗವಿಕಲತೆ ಬಗ್ಗೆ, ಸರ್ಕಾರದ ಆದೇಶ ಸಂಖ್ಯೆ: ಮಮಇ 65 ಪಿಹೆಚ್‌ಪಿ 2010, ದಿನಾಂಕ: 18.02.2011 ರಂತೆ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿಯ ವೈದ್ಯಕೀಯ ಪ್ರಾಧಿಕಾರ/ತಾಲ್ಲೂಕು ಮಟ್ಟದ ವೈದ್ಯಕೀಯ ಪ್ರಾಧಿಕಾರ/ಜಿಲ್ಲಾ ಮಟ್ಟದ ವೈದ್ಯಕೀಯ ಪ್ರಾಧಿಕಾರ/ಬೆಂಗಳೂರು ವೈದ್ಯಕೀಯ ಪ್ರಾಧಿಕಾರ ಇವರಿಂದ ಪ್ರಮಾಣ ಪತ್ರವನ್ನು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರಬೇಕು.<br><br>ನಿಗದಿಪಡಿಸಿದ ನಮೂನೆಗಳನ್ನು ಹೊರತುಪಡಿಸಿ ಇತರೆ ಯಾವುದೇ ನಮೂನೆಯಲ್ಲಿ ಅಂಗವಿಕಲತೆ ಬಗ್ಗೆ ಪಡೆಯಲಾಗಿರುವ ಪ್ರಮಾಣ ಪತ್ರ/ ಗುರುತಿನ ಚೀಟಿಯ ಪ್ರತಿಗಳನ್ನು ನೇಮಕಾತಿಗೆ ಪರಿಗಣಿಸಲು ಅವಕಾಶವಿರುವುದಿಲ್ಲ.<br><br>**<u>ಸೂಚನೆ:</u> ಅಂಗವಿಕಲ ಅಭ್ಯರ್ಥಿಗಳ ಅಂಗವಿಕಲ ಮೀಸಲಾತಿಯು ನಿಗಮವು ವೈದ್ಯಕೀಯ ಮಂಡಳಿಯಿಂದ ನಡೆಸುವ ವೈದ್ಯಕೀಯ ಪರೀಕ್ಷೆಯ ವರದಿಗೆ ಬದ್ಧವಾಗಿರುತ್ತದೆ.** |

| | | |
|---|---|---|
| vi) | ತೃತೀಯ ಲಿಂಗ ಅಭ್ಯರ್ಥಿಗಳು | ಭಾರತ ಸರ್ಕಾರದ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವಾಲಯದ ಅಧಿಸೂಚನೆಯನ್ವಯ ಕೇಂದ್ರ ಸರ್ಕಾರವು ಹೊರಡಿಸಿರುವ ತೃತೀಯ ಲಿಂಗ ವ್ಯಕ್ತಿಗಳ (ರಕ್ಷಣಾ ಹಕ್ಕುಗಳು) ನಿಯಮಗಳು, 2020 ರ ಅನ್ವಯ ಸಂಬಂಧಪಟ್ಟ ಪ್ರಮಾಣ ಪತ್ರವನ್ನು ಜಿಲ್ಲಾ ಮ್ಯಾಜಿಸ್ಟ್ರೇಟ್ ರವರಿಂದ ಪಡೆದಿರತಕ್ಕದ್ದು. ಸದರಿ ಪ್ರಮಾಣ ಪತ್ರ ಹೊಂದಿರದಿದ್ದಲ್ಲಿ, ಈ ಮೀಸಲಾತಿಗೆ ಪರಿಗಣಿಸಲಾಗುವುದಿಲ್ಲ. |
| vii) | ಸೇವಾನಿರತ ಅಭ್ಯರ್ಥಿ | ಯಾರೇ ಅರ್ಜಿದಾರನು ತಾನು ಅರ್ಜಿ ಸಲ್ಲಿಸುವ ಸಮಯದಲ್ಲಿ ಸರ್ಕಾರದ ಯಾವುದೇ ಇತರೆ ಇಲಾಖೆಯಲ್ಲಿ ಅಥವಾ ಯಾವುದೇ ಇತರೆ ರಾಜ್ಯ ಸರ್ಕಾರದ ಅಥವಾ ಕೇಂದ್ರ ಸರ್ಕಾರದ ಅಥವಾ ಈ ಸಂಬಂಧವಾಗಿ ಸರ್ಕಾರವು ನಿರ್ದಿಷ್ಟಪಡಿಸಿದ ಯಾವುದೇ ಇತರೆ ಪ್ರಾಧಿಕಾರದಲ್ಲಿ (ಕವಿಪ್ರನಿನಿ ಮತ್ತು ವಿದ್ಯುತ್ ಸರಬರಾಜು ಕಂಪನಿಗಳನ್ನೊಳಗೊಂಡಂತೆ) ಖಾಯಂ ಅಥವಾ ತಾತ್ಕಾಲಿಕ ನೌಕರಿಯಲ್ಲಿದ್ದರೆ ಮತ್ತು ಆತನು ಯಾರ ಅಧೀನದಲ್ಲಿ ಉದ್ಯೋಗದಲ್ಲಿರುವನೋ ಆ ಇಲಾಖಾ ಮುಖ್ಯಸ್ಥರಿಂದ ಅಥವಾ ಸಂದರ್ಭಾನುಸಾರ ಸರ್ಕಾರದಿಂದ ಅಥವಾ ಪ್ರಾಧಿಕಾರದಿಂದ ಒಪ್ಪಿಗೆ ಪಡೆಯದೆ ಅರ್ಜಿಯನ್ನು ಸಲ್ಲಿಸಿದ್ದರೆ, ಆತನು ನಿಗಮದ ಯಾವುದೇ ಹುದ್ದೆಯ ನೇಮಕಕ್ಕೆ ಅರ್ಹನಾಗಿರತಕ್ಕದ್ದಲ್ಲ. ಸೇವೆಯಲ್ಲಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ಮುನ್ನ ಅನುಮತಿಯನ್ನು ಅಂದರೆ ನಿರಾಕ್ಷೇಪಣಾ ಪತ್ರವನ್ನು ಕಡ್ಡಾಯವಾಗಿ ಅವರುಗಳ ನೇಮಕಾತಿ ಪ್ರಾಧಿಕಾರಿಗಳ ಸಹಿ, ಮೊಹರು ಮತ್ತು ಜಾರಿ ಮಾಡಿದ ದಿನಾಂಕದೊಂದಿಗೆ ಪಡೆದಿಟ್ಟುಕೊಂಡಿರತಕ್ಕದ್ದು. |

**ಸೂಚನೆ:**

i) ಈ ಮೇಲಿನ ಮೀಸಲಾತಿಗಳಿಗೆ ಸಂಬಂಧಿಸಿದಂತೆ ರಾಜ್ಯ ಸರ್ಕಾರವು ನಿಗದಿಪಡಿಸಿರುವ ನಮೂನೆಗಳನ್ನು ವೆಬ್‌ಸೈಟ್‌ನಲ್ಲಿ ಉದ್ಯೋಗ ಪ್ರಕಟಣೆಯೊಂದಿಗೆ ಅಪ್-ಲೋಡ್ ಮಾಡಲಾಗಿದೆ.

ii) **ಈಗಾಗಲೇ ಸರ್ಕಾರಿ/ಕವಿಪ್ರನಿನಿ/ಎಸ್ಕಾಂಗಳಲ್ಲಿ ಖಾಯಂ ಸೇವೆಯಲ್ಲಿರುವ ಅಭ್ಯರ್ಥಿಗಳು ತಮ್ಮ ಉದ್ಯೋಗದಾತರಿಂದ 'ನಿರಾಕ್ಷೇಪಣಾ ಪತ್ರವನ್ನು' ಪಡೆದಿಟ್ಟುಕೊಳ್ಳತಕ್ಕದ್ದು. ಸದರಿ ಅಭ್ಯರ್ಥಿಗಳು ಈ ಉದ್ಯೋಗ ಪ್ರಕಟಣೆಯಡಿಯಲ್ಲಿ ನೇಮಕಾತಿ ಹೊಂದಿದಲ್ಲಿ, ಹಿಂದಿನ ಸೇವೆಯಿಂದ ಬಿಡುಗಡೆ ಹೊಂದಿರುವ ಪತ್ರವನ್ನು ಸಲ್ಲಿಸಿದಲ್ಲಿ ಮಾತ್ರ ನೇಮಕಾತಿ ಆದೇಶವನ್ನು ಜಾರಿ ಮಾಡಲಾಗುವುದು.**

iii) **ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದ ನಂತರ ಪಡೆದಿರುವಂತಹ ಜಾತಿ ಪ್ರಮಾಣ ಪತ್ರಗಳನ್ನು ಪರಿಗಣಿಸಲಾಗುವುದಿಲ್ಲ.**

iv) ಮೂಲ ದಾಖಲಾತಿ ಪರಿಶೀಲನಾ ಸಮಯದಲ್ಲಿ, ಆನ್-ಲೈನ್ ಅರ್ಜಿಯೊಂದಿಗೆ ಕೋರಿರುವ ಎಲ್ಲಾ ಮೀಸಲಾತಿಗಳಿಗೆ ಸಂಬಂಧಿಸಿದಂತೆ ಎಲ್ಲಾ ದಾಖಲಾತಿ/ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು. ತಪ್ಪಿದ್ದಲ್ಲಿ, ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಿ, **ಅವರ ಅಭ್ಯರ್ಥಿತನವನ್ನು ಸಾಮಾನ್ಯ ಪ್ರವರ್ಗದಡಿಯಲ್ಲಿ ಅರ್ಹರಾದಲ್ಲಿ ಮಾತ್ರ ಪರಿಗಣಿಸಲಾಗುವುದು. ನಿಗದಿಪಡಿಸಿದ ನಮೂನೆಗಳನ್ನು ಹೊರತುಪಡಿಸಿ, ಇತರೆ ಯಾವುದೇ ನಮೂನೆಗಳಲ್ಲಿ ಪಡೆಯಲಾದ ಮೀಸಲಾತಿ ಪ್ರಮಾಣ ಪತ್ರಗಳನ್ನು ತಿರಸ್ಕರಿಸಲಾಗುವುದು.**

## 12. ಕಿರಿಯ ಸ್ಟೇಷನ್ ಪರಿಚಾರಕ ಹುದ್ದೆಯ ಕೆಲಸ ಮತ್ತು ಜವಾಬ್ದಾರಿಗಳು:

i) ವಿದ್ಯುತ್ ಗೋಪುರ ಹಾಗೂ ಕಂಬಗಳನ್ನು ಹತ್ತುವುದು, ವಿದ್ಯುತ್ ಕಂಬಗಳ ನೆಡುವಿಕೆ, ಗುಂಡಿಗಳ ಅಗೆಯುವಿಕೆ, ಕಂಬಗಳ ಮತ್ತು ಪೂರಕ ಸಾಮಗ್ರಿಗಳನ್ನು ಹೊರುವುದು, ಸ್ಟೇಷನ್‌ನ ಸ್ವಚ್ಛತೆ, ಕ್ಲೀನಿಂಗ್ ಯಾರ್ಡ್‌ನಲ್ಲಿರುವ ಕೇಬಲ್ ಉಪಕರಣಗಳ ಸ್ವಚ್ಛತೆ, ಟ್ರಾನ್ಸ್‌ಫಾರ್ಮರ್/ಸ್ಟೇಷನ್ ಆವರಣದಲ್ಲಿರುವ ಹುಲ್ಲುಗಳನ್ನು ಕತ್ತರಿಸುವುದು, ಜಿ.ಓ.ಎಸ್. ಕಾರ್ಯನಿರ್ವಹಣೆ, ಸೂಚನೆಯ ಮೇರೆಗೆ ಸಂಪರ್ಕ ಕಡಿತಗೊಳಿಸುವಿಕೆ, ಗ್ರೌಂಡ್ ಪಿಟ್‌ಗೆ ನೀರು ಹಾಯಿಸುವುದು, ಸ್ಟೇಷನ್‌ನ ಕಾರ್ಯನಿರ್ವಹಣೆಯ ಬಗ್ಗೆ ಪಾಳಿ ಸಿಬ್ಬಂದಿ ಮತ್ತು ಇತರೆ ಸಿಬ್ಬಂದಿಗಳಿಗೆ ಸಹಾಯ ಮಾಡುವುದು, ಅವಶ್ಯವಿದ್ದಲ್ಲಿ ಸಾಮಾನ್ಯ ಭಾರದ ವಸ್ತುಗಳನ್ನು ಹೊರುವುದು, ಟಿ&ಪಿ ಸಾಮಗ್ರಿಗಳ ನಿರ್ವಹಣೆ ಅಲ್ಲದೇ ಶಾಖೆಯ ಮುಖ್ಯಸ್ಥರು ನಿಗಮದ ಹಿತದೃಷ್ಟಿಯಿಂದ ವಹಿಸುವ ಇತರೆ ಯಾವುದೇ ಕೆಲಸಗಳನ್ನು ನಿರ್ವಹಿಸುವುದು.

ii) ಅಗತ್ಯ ಇರುವ ಸ್ಥಳಗಳಲ್ಲಿ ಪಾಳಿ ಆಧಾರದಲ್ಲಿ ಕಾರ್ಯನಿರ್ವಹಿಸುವುದು.

## 13. ಕಿರಿಯ ಪವರ್‌ಮ್ಯಾನ್ ಹುದ್ದೆಯ ಕೆಲಸ ಮತ್ತು ಜವಾಬ್ದಾರಿಗಳು:

i) ವಿದ್ಯುತ್ ಕಂಬಗಳ ನೆಡುವಿಕೆ, ಗುಂಡಿಗಳ ಅಗೆಯುವಿಕೆ, ಕಂಬಗಳ ಮತ್ತು ಪೂರಕ ಸಾಮಗ್ರಿಗಳನ್ನು ಹೊರುವುದು, ವಿದ್ಯುತ್ ಮಾರ್ಗಗಳ ತಪಾಸಣೆ, ಮಾರ್ಗಗಳ ನಿರ್ವಹಣೆಗಾಗಿ ಕಂಬಗಳನ್ನು ಹತ್ತಿ ಕಾರ್ಯನಿರ್ವಹಿಸುವುದು, ಸಾಧನ ಸಲಕರಣೆ ಮತ್ತು ಸ್ಥಾವರಗಳ ಸ್ವಚ್ಛತೆ, ಪವರ್‌ಮ್ಯಾನ್/ಸಹಾಯಕ ಪವರ್‌ಮ್ಯಾನ್ ರವರುಗಳು ನಿರ್ವಹಿಸುವ ಮಾರ್ಗಗಳ ನಿರ್ವಹಣೆ ಕಾರ್ಯದಲ್ಲಿ ಸಹಾಯ ಮಾಡುವುದು, ಫ್ಯೂಸ್ ಆಫ್ ಕಾಲ್ ಮತ್ತು ದೋಷಗಳನ್ನು ಕಂಡುಹಿಡಿದು ಸರಿಪಡಿಸುವುದು, ನಿರ್ವಹಣೆ, ಬ್ರೇಕ್‌ಡೌನ್ ಕಾರ್ಯಗಳಲ್ಲಿ ಹಾಜರಿದ್ದು ಸಹಾಯ ಮಾಡುವುದು ಮತ್ತು ರಿಲೇ ಟೆಸ್ಟಿಂಗ್ ವಿಭಾಗದ ಕೆಲಸ ಕಾರ್ಯಗಳಲ್ಲೂ ಸಹಾಯ ಮಾಡುವುದು. ಕ್ಯಾಂಪ್‌ಗಳಲ್ಲಿ ಕಾರ್ಯನಿರ್ವಹಿಸುವುದು ಹಾಗೂ ಪೂರಕ ದಾಖಲೆಗಳನ್ನು ನಿರ್ವಹಿಸುವುದು, ಅಲ್ಲದೇ, ಶಾಖೆಯ ಮುಖ್ಯಸ್ಥರು ನಿಗಮ/ಕಂಪನಿಯ ಹಿತದೃಷ್ಟಿಯಿಂದ ವಹಿಸುವ ಯಾವುದೇ ಕೆಲಸಗಳನ್ನು ನಿರ್ವಹಿಸುವುದು.

ii) ಅಗತ್ಯ ಇರುವ ಸ್ಥಳಗಳಲ್ಲಿ ಪಾಳಿ ಆಧಾರದಲ್ಲಿ ಕಾರ್ಯನಿರ್ವಹಿಸುವುದು.

**ನಿರ್ದೇಶಕರು**
**(ಆಡಳಿತ ಮತ್ತು ಮಾನವ ಸಂಪನ್ಮೂಲ)**
**ಕವಿಪ್ರನಿನಿ**